ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 117

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795

ಮಂಗಳವಾರ: 14-04-2026

## ಜನ, ದೇವರ ಇಚ್ಛೆಯಿದ್ದರೆ ಮತ್ತೆ ವಿಧಾನಸೌಧಕ್ಕೆ: ಎಚ್‌ಡಿಕೆ

**ಬೆಂಗಳೂರು, ಏ. 13–** ವಿಧಾನಸೌಧಕ್ಕೆ ಮತ್ತೆ ತಾವು ವಾಪಸ್ ಬರುವುದು ಜನರ ಆಶೀರ್ವಾದ ಅದು ಭಗವಂತನ ಇಚ್ಛೆ ಮೇಲೆ ನಿಂತಿದೆ ಎಂದು ಕೇಂದ್ರದ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಹೇಳಿದರು.

ಕೇಂದ್ರದ ಸಚಿವರಾಗಿ ಎರಡು ವರ್ಷಗಳ ನಂತರ ಇದೇ ಮೊದಲ ಬಾರಿಗೆ ವಿಧಾನಸೌಧಕ್ಕೆ ಮಂಡ್ಯದಲ್ಲಿ ಕೈಗಾರಿಕೆಸ್ಥಾಪನೆ ಸಂಬಂಧ ಚರ್ಚಿಸಲು ವಿಧಾನಸೌಧಕ್ಕೆ ಇಂದು ಆಗಮಿಸಿದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಕೈಗಾರಿಕೆಗಳಿಗೆ ಸಂಬಂಧಿಸಿದಂತೆ ಕೆಲ ವಿಚಾರಗಳ ಚರ್ಚೆಗಾಗಿ ವಿಧಾನಸೌಧಕ್ಕೆ ಬಂದಿದ್ದೇನೆ ಎಂದರು.

ಮತ್ತೆ ವಿಧಾನಸೌಧಕ್ಕೆ ಬರುತ್ತೀರಾ ಎಂಬ ಪ್ರಶ್ನೆಗೆ ಅವೆಲ್ಲಾ ಭಗವಂತ ಮತ್ತು ರಾಜ್ಯದ ಜನತೆನಿಗದಿ ಮಾಡುತ್ತಾರೆ. ಜನರ ಆಶೀರ್ವಾದದ ಜತೆಗೆ ಭಗವಂತ ನಮ್ಮ ಹಣೆಯಲ್ಲಿ ಬರೆದಿದ್ದರೆ ಅದು ಹಾಗೆಯೇ ಆಗ ತ್ತದೆ ನೋಡೋಣ. ಮುಂದಿನ ದಿನಗಳಲ್ಲಿ ಭಗವಂತನ ಇಚ್ಛೆ ಏನಿದೆ ಎಂದರು.

ನಾವು ಬಿಜೆಪಿ ಜತೆ ಮೈತ್ರಿ ಮಾಡಿಕೊಂಡಿದ್ದೇವೆ. ಮುಂದಿನ ದಿನಗಳಲ್ಲಿ ಮತ್ತೆ ವಿಧಾನಸೌಧಕ್ಕೆ ಬರಲು ಜನರ ಆಶೀರ್ವಾದ ಪಡೆಯಲು ಪ್ರಯತ್ನ ಮಾಡುತ್ತೇವೆ ಎಂದು ಕುಮಾರಸ್ವಾಮಿ ಹೇಳಿದರು.

ಸಭೆ–ಇದಾದ ಬಳಿಕ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಮಂಡ್ಯದಲ್ಲಿ ಸ್ಥಾಪಿಸಲು ಉದ್ದೇಶಿಸಿರುವ



ಆಟೋಮೋಟಿವ್ ರಿಸರ್ಚ್ ಕೈಗಾರಿಕೆಯ ಸಂಬಂಧ ರಾಜ್ಯದ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಮತ್ತು ಕೈಗಾರಿಕಾ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ವಿಧಾನಸೌಧದಲ್ಲಿ ಸಭೆ ನಡೆಸಿದರು

ಅದ್ಧೂರಿ ಸ್ವಾಗತ–ಕೇಂದ್ರ ಸಚಿವರಾದ ನಂತರ ವಿಧಾನಸೌಧಕ್ಕೆ ಮೊದಲ ಬಾರಿಗೆ ಆಗಮಿಸಿದ ಕುಮಾರಸ್ವಾಮಿ ಅವರನ್ನು ಜೆಡಿಎಸ್ ಶಾಸಕರು ವಿಧಾನಸೌಧದ ಬಳಿ ಅದ್ಧೂರಿಯಾಗಿ ಸ್ವಾಗತಿಸಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್‌ಬಾಬು, ಶಾಸಕರುಗಳಾದ ಶರವಣ, ಬೋಜೇಗೌಡ ಸೇರಿದಂತೆ ಹಲವು ಶಾಸಕರುಕುಮಾರಸ್ವಾಮಿ ಅವರಿಗೆಹೂ ಗುಚ್ಛ ನೀಡಿ ಸ್ವಾಗತಿಸಿದ್ದು, ವಿಶೇಷವಾಗಿತ್ತು.

## ಮಂತ್ರಿ ಸ್ಥಾನ ಕೇಳಲು ಇದು ಸಮಯವಲ್ಲ: ಶಿಸ್ತು ಮೀರಿದರೆ ಕ್ರಮ



**ಬೆಂಗಳೂರು, ಏ. 13–** ಕಾಂಗ್ರೆಸ್‌ನ ಹಿರಿಯ ಶಾಸಕರು ಮಂತ್ರಿ ಸ್ಥಾನಕ್ಕಾಗಿ ದೆಹಲಿಯಲ್ಲಿ ಮೊಕ್ಕಾಂ ಹೂಡಿರುವಾಗಲೇ ಬೆಂಗಳೂರಿನಲ್ಲಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರನ್ನು ಭೇಟಿ ಮಾಡಿ ಚರ್ಚಿಸಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವ ಸ್ಥಾನ ಕೇಳುವ ಸಮಯ ಇದಲ್ಲ. ಪಕ್ಷದ ಶಿಸ್ತು ಮೀರಿದರೆ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ದೆಹಲಿಯಲ್ಲಿರುವ ಕೈ ಶಾಸಕರಿಗೆ ಎಚ್ಚರಿಕೆ ನೀಡಿದ್ದಾರೆ.

ಎಐಸಿಸಿ ಅಧ್ಯಕ್ಷರನ್ನು ಭೇಟಿ ಮಾಡಿದ ನಂತರ ಅವರ ನಿವಾಸದ ಹೊರಗೆ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್, ಪಕ್ಷದ ಶಿಸ್ತನ್ನು ಯಾರೂ ಮೀರಬೇಡಿ. ಪಕ್ಷದ ಚೌಕಟ್ಟಿನೊಳಗೆ ಎಲ್ಲರೂ ಮಾತನಾಡಬೇಕು. ನಾನು ಮಾಧ್ಯಮಗಳಲ್ಲಿ ಕೈ ಶಾಸಕರ ಹೇಳಿಕೆಗಳನ್ನು ಗಮನಿಸಿದ್ದೇನೆ. ಕೆಲವರು ಏನೇನೋ ಮಾತನಾಡಿದ್ದಾರೆ. ಮಾಧ್ಯಮ ನಿಮ್ಮ ಭವಿಷ್ಯ ಅಲ್ಲ, ಪಕ್ಷ ನಿಮ್ಮ ಭವಿಷ್ಯ., ಪಕ್ಷದಲ್ಲೇ ಎಲ್ಲರ ಭವಿಷ್ಯವಿದೆ ಎಂದರು.

ಸಂಪುಟ ಪುನಾರಚನೆ ಕೇಳುವ ಸಮಯ ಇದಲ್ಲ. ಮೊದಲು ಸ್ಥಳೀಯ ಸಂಸ್ಥೆಗಳ ಚುನಾವಣೆ 2ನೇಪುಟಕ್ಕೆ

## ಏ.20 ರಂದು ಬಸವಜಯಂತಿ ಕಾರ್ಯಕ್ರಮ: ಭೀಮರಾಯ ಬಿ.ರಾಮಸಮುದ್ರ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ತಾಲೂಕು ಆಡಳಿತದಿಂದ ಸರಕಾರದ ವಿವಿಧ ಜಯಂತಿಗಳ ಆಚರಣೆಯ ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಮಾತನಾಡಿ ಏ.20 ರಂದು ಬಸವಜಯಂತಿ ಅಂಗವಾಗಿ ತಾಲೂಕು ಆಡಳಿತ ಹಾಗೂ ಅಖಿಲಭಾರತ ವೀರಶೈವ ಲಿಂಗಯಾತ ಮಹಾಸಭಾ, ತಾಲೂಕು ವೀರಶೈವ ಲಿಂಗಾಯತ ಸಮಾಜ, ಬಸವಕೇಂದ್ರ ಸಹಯೋಗದಲ್ಲಿ ಪಟ್ಟಣದ ಬಸವವೃತ್ತದಿಂದ ತಹಶೀಲ್ದಾರ್ ಕಚೇರಿಯವರೆಗೆ ವಚನ ಗಾಯನ ಮೂಲಕ ವಿವಿಧ ಕಲಾತಂಡಗಳೊಂದಿಗೆ ಶ್ರೀ ವಿಶ್ವಗುರು ಬಸವಣ್ಣನವರ ಭಾವಚಿತ್ರವನ್ನು ಶಾಸಕ ಹಂಪಯ್ಯನಾಯಕ ನೆತೃತ್ವದಲ್ಲಿ ಮೆರವಣಿಗೆ ನಡೆಸಲಾಗುವುದು ನಂತರ ವೇದಿಕೆಯಲ್ಲಿ ಬಸವಣ್ಣನವರ ಜೀವನ ಹಾಗೂ ತತ್ವ ಸಂದೇಶಗಳ ಬಗ್ಗೆ ಉಪನ್ಯಾಸಕರಿಂದ ಉಪನ್ಯಾಸ ಹಾಗೂ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ತೋರಿದ ಗಣ್ಯರಿಗೆ ಸನ್ಮಾನ ,ವಚನ ಕಂಠಪಾಟ ಸ್ಪರ್ಧೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ನಡೆಸಲಾಗುವುದು. 21 ರಂದು ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮವನ್ನು ತಹಶೀಲ್ದಾರ್ ಕಚೇರಿಯಲ್ಲಿ ವಿಪ್ರ ಸಮುದಾಯದವರೊಂದಿಗೆ ಆಚರಿಸಲಾಗುವುದು. ಶ್ರೀ ಶಂಕರಾಚಾರ್ಯರ ಜೀವನ ಹಾಗೂ ತತ್ವ ಸಂದೇಶಗಳ ಬಗ್ಗೆ ಉಪನ್ಯಾಸಕರಿಂದ ಉಪನ್ಯಾಸ ಹಾಗೂ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ತೋರಿದ ಗಣ್ಯರಿಗೆ ಸನ್ಮಾನ ಕಾರ್ಯಕ್ರಮ ನಡೆಸಲಾಗುವುದು. ಏ.23 ರಂದು ಶ್ರೀ ಭಗೀರಥ ಜಯಂತಿ ಅಂಗವಾಗಿ ತಹಶೀಲ್ದಾರ್ ಕಚೇರಿಯಲ್ಲಿ ಶ್ರೀ ಭಗೀರಥ ಮಹಾರ್ಷಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಸರಳವಾಗಿ ಆಚರಿಸಲಾಗುವುದು. ಸರಕಾರದ ಜಯಂತಿ ಅಗಿರುವುದರಿಂದ ಮೂವರು ಮಹಾನಿಯರ ಜಯಂತಿಗಳನ್ನು ಸರಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಆಚರಿಸಿ ತಾಲೂಕು ಆಡಳಿತ ವತಿಯಿಂದ ನಡೆಯುವ ಜಯಂತಿಗಳಲ್ಲಿ ತಾಲೂಕಿನ ಎಲ್ಲಾ ಇಲಾಖೆಗಳ ತಾಲೂಕು ಮಟ್ಟದ ಆಧಿಕಾರಿಗಳು 2ನೇಪುಟಕ್ಕೆ►

## ತಾಲೂಕು ಆಡಳಿತದಿಂದ ಪಕ್ಷಿಗಳಿಗೆ ನೀರುಣಿಸುವ ತೊಟ್ಟಿಗಳ ವಿತರಣೆ

ಧೈರ್ಯದ ದಾರಿ




**ಮಾನ್ವಿ:** ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತ ಹಾಗೂ ಪಕ್ಷಿ ಪ್ರೇಮಿ ಸಲಾವುದ್ದೀನ್ ಸಹಯೋಗದಲ್ಲಿ ಪಕ್ಷಿಗಳಿಗೆ ನೀರುಣಿಸುವ ತೊಟ್ಟಿಗಳ ವಿತರಣೆ ಕಾರ್ಯಕ್ರಮವನ್ನು ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ರವರು ಪಕ್ಷಿಗಳಿಗೆ ನೀರುಣಿಸುವ ತೊಟ್ಟಿಗಳನ್ನು ವಿತರಿಸುವ ಮೂಲಕ ಚಾಲನೆ ನೀಡಿ ಮಾತನಾಡಿ ಈ ಬಾರಿ ಬೇಸಿಗೆಯಲ್ಲಿ ಹೆಚ್ಚಿನ ಉಷ್ಣಾಂಶ ದಾಖಲಾಗಿರುವುದರಿಂದ ಜನರಿಗಾಗಿ ಅರವಟಿಗೆಗಳನ್ನು ಪ್ರಾರಂಭಿಸಲಾಗಿದು ಅದರಂತೆ ನಮ್ಮ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಸವಾಗಿರುವ ಪಕ್ಷಿಗಳಿಗೂ ಕೂಡ ನೀರಿನ ಅವಶ್ಯಕತೆ ಇರುವುದರಿಂದ ಸರಕಾರಿ ಕಚೇರಿಗಳ ಆವರಣದಲ್ಲಿ ಹಾಗೂ ಮನೆಗಳ ಛಾವಣಿಗಳ ಮೇಲೆ ಬೇಸಿಗೆ ಮುಗಿಯುವವರೆಗೂ ಪಕ್ಷಿಗಳಿಗೆ ನೀರುಣಿಸುವ ತೊಟ್ಟಿಗಳನ್ನು ಕಟ್ಟಿ ಅವುಗಳಿಗೆ ನಿತ್ಯ ನೀರು ಹಾಗೂ ಆಹಾರ ಪದಾರ್ಥಗಳನ್ನು ನೀಡುವುದರಿಂದ ಸಾಕಷ್ಟು ಪಕ್ಷಿಗಳ ಜೀವಗಳನ್ನು ಉಳಿಸುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಪಕ್ಷಿ ಪ್ರೇಮಿ ಸಲಾವುದ್ದೀನ್ ಮಾತನಾಡಿ ಪ್ರಕೃತಿಯಲ್ಲಿನ ಪ್ರತಿಯೊಂದು ಜೀವಿಗೂ ಕೂಡ ತನ್ನದೆ ಆದ ಮಹಾತ್ವವಿದೆ ಪರಿಸರ ಸಮಾತೋಲನದಲ್ಲಿ ಪಕ್ಷಿಗಳ ಪಾತ್ರ ಬಹುಳ ಪ್ರಮುಖವಾಗಿರುವುದರಿಂದ ಅಳುವಿನಂಚಿನಲ್ಲಿರುವ ಪಕ್ಷಿಗಳನ್ನು ನಾವು ಉಳಿಸಿಕೊಳ್ಳಬೇಕಾಗಿದೆ ಪಕ್ಷಿಗಳು ತಮ್ಮಗೆ ಬೇಕಾದ ಆಹಾರ ಮತ್ತು ನೀರನ್ನು ತಾವೆ ಹುಡಿಕಿಕೊಳ್ಳುತ್ತವೆ ಅದ್ದರೆ ಬೇಸಿಗೆಯಲ್ಲಿ ನೀರಿನ ಮೂಲಗಳು ಬತ್ತುವುದರಿಂದ ಹಾಗೂ ಕೃಷಿ ಚಟುವಟಿಕೆಗಳು ಸ್ಥಗಿತಗೊಳ್ಳುವುದರಿಂದ ಪಕ್ಷಿಗಳಿಗೆ ಅಗತ್ಯವಾದ ನೀರು ಹಾಗೂ ಆಹಾರ ಸುಲಾಭವಾಗಿ ದೊರೆಯುವುದಿಲ್ಲ ಸಾಕಷ್ಟು ಸಣ್ಣ ಸಣ್ಣ ಹಕ್ಕಿಗಳು ಕುಡಿಯುವುದಕ್ಕೆ ನೀರು ಸಿಗದೆ ತಮ್ಮ ಜೀವವನ್ನು ಬಿಡುತ್ತವೆ ಅದ್ದರಿಂದ ಬೇಸಿಗೆ ಮುಗಿಯುವವರೆಗೂ ಪಕ್ಷಿಗಳಿಗೆ ನೀರು ಹಾಗೂ ಆಹಾರದ ವ್ಯವಸ್ಥೆ ಮಾಡುವುದು ಅಗತ್ಯವಾಗಿರುವುದರಿಂದ ಪ್ರತಿಯೊಂದು ಮನೆಗಳ ಆವರಣದಲ್ಲಿ ಪಕ್ಷಿಗಳಿಗೆ ಸ್ವಲ್ಪ ನೀರಿನ ವ್ಯವಸ್ಥೆ ಮಾಡುವುದು ಅಗತ್ಯ ಎಂದು ತಿಳಿಸಿದರು.

ಗ್ರೇಡ್–2 ತಹಶಿಲ್ದಾರ್ ಅಬ್ದುಲ್ ವಾಹಿದ್, 2ನೇಪುಟಕ್ಕೆ

## ಪತ್ರಕರ್ತರು ಸತ್ಯದ ಪರವಾಗಿರಲಿ: ಯು. ಟಿ. ಖಾದರ್ ಸಲಹೆ




**ಬೀದರ್: ಏ.13:**ಪತ್ರಿಕೋದ್ಯಮವು ಸಾಮಾಜಿಕ ಜವಾಬ್ದಾರಿಯ ಪ್ರತೀಕವಾಗಿದೆ ಎಂದು ವಿಧಾನಸಭೆಯ ಸಭಾಧ್ಯಕ್ಷ ಯು.ಟಿ. ಖಾದರ್ ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ನಗರದ ಝೀರಾ ಕನ್ವೆನ್ಶನ್ ಹಾಲನಲ್ಲಿ

ಭಾನುವಾರ ನಡೆದ 40ನೇ ಪತ್ರಕರ್ತರ ರಾಜ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ನಮ್ಮ ಸಮಾಜ, ದೇಶ ಕಟ್ಟುವಲ್ಲಿ ಮಹತ್ವದ ಪಾತ್ರ ವಹಿಸುವ ಪತ್ರಕರ್ತರ ಪೆನ್ನು

ಸದಾಕಾಲ ಸತ್ಯದ ಪರವಾಗಿರಬೇಕು ಎಂದು ಸಲಹೆ ಮಾಡಿದರು.

ನಮ್ಮ ದೇಶದ ಪ್ರಬಲ ಶಕ್ತಿಯಾದ ಪತ್ರಿಕೋದ್ಯಮ, ಪತ್ರಕರ್ತರು, ಈ ದೇಶದ ಎಲ್ಲ ಜನರು ಒಂದೇ ಎಂದು ಹೇಳುವ ಅವಶ್ಯಕತೆಯಿದೆ. ಪ್ರತಿಯೊಬ್ಬರಿಗೂ ಪ್ರೇರಣಾದಾಯಕವಾದ ಬರವಣಿಗೆಯ ಶಕ್ತಿಯನ್ನು ಪತ್ರಕರ್ತರು ಹೊಂದಬೇಕು ಎಂದು ಅವರು ಸಲಹೆ ಮಾಡಿದರು.

ರಾಜಕೀಯ ಮತ್ತು ಪತ್ರಿಕೋದ್ಯಮ ಸಮಾಜದ ಎರಡು ಕಣ್ಣುಗಳಿದ್ದಂತೆ. ಎರಡೂ ಉತ್ತಮವಾದಾಗ ಸಮಾಜವು ಸಂಪನ್ನವಾಗಿರಲು ಸಾಧ್ಯವಿದೆ. ಪತ್ರಿಕೆಗಳು ಬರೀ ಟೀಕೆ, ಹೊಗಳಿಕೆಗೆ ಮಾತ್ರ ಸೀಮಿತವಾಗಬಾರದು. ಉತ್ತಮವಾಗಿ ಕೆಲಸ ಮಾಡುವರಿಗೆ ಪ್ರೇರಣೆಯಾಗುವ ಕಾರ್ಯ ಮಾಡಬೇಕು. ಮತ್ತು ಯಾವಾಗಲೂ ಪ್ರಾಮಾಣಿಕ ಸತ್ಯವನ್ನು ಪ್ರತಿಪಾದಿಸಬೇಕು ಎಂದು ಅವರು ತಿಳಿಸಿದರು.

ಕಣ್ಣು, ಕಿವಿ ತೆರೆದು ಸಮಾಜವನ್ನು ತಲಸ್ಪರ್ಶಿಯಾಗಿ ನೋಡಿದಾಗಲೇ ಉತ್ತಮ ಪತ್ರಕರ್ತನಾಗಲು ಸಾಧ್ಯವಿದೆ ಎಂದು ಅವರು ಸಲಹೆ ಮಾಡಿದರು.

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಮಾತನಾಡಿ, ಬೀದರ ಜಿಲ್ಲೆಯು ಸರ್ವ ಜನಾಂಗದ ಶಾಂತಿಯ2ನೇಪುಟಕ್ಕೆ

## ಬಡತನದಲ್ಲಿ ಅರಳಿದ ರೈತನ ಮಗಳ ಪ್ರತಿಭೆಗೆ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಹಾಗೂ ವಾಲ್ಮೀಕಿ ಸಮುದಾಯದ ವತಿಯಿಂದ ಸನ್ಮಾನ



ಧೈರ್ಯದ ದಾರಿ

**ಮಾನ್ವಿ:** ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಕಲಾ ವಿಭಾಗದಲ್ಲಿ 593 (98.83%)ಅಂಕಗಳನ್ನು ತೆಗೆದು ಕೊಂಡು ಅಮೋಘ ಸಾಧನೆ ಮಾಡಿದ ದುರ್ಗಾಭವಾನಿ, ರಾಯಚೂರು ಜಿಲ್ಲೆಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದಾಳೆ. ಅಲ್ಲದೆ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ದ್ವಿತೀಯ ರ್ಯಾಂಕ್ ಮತ್ತು ರಾಜ್ಯ ಮಟ್ಟದಲ್ಲಿ ನಾಲ್ಕನೇ ಸ್ಥಾನ ಗಳಿಸಿ ಗಮನ ಸೆಳೆದಿದ್ದಾಳೆ.ಬಡತನದಲ್ಲಿ ಅರಳಿದ ಪ್ರತಿಭೆ

ಅಮರಾವತಿ ಗ್ರಾಮದ ಬಸವರಾಜ ಅವರ ಮಗಳಾದ ದುರ್ಗಾಭವಾನಿ ಅವರ ಈ ಸಾಧನೆಗೆ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ಮೆಚ್ಚುಗೆ ವ್ಯಕ್ತವಾಗಿದ್ದು, ಪ್ರತಿಭೆಗೆ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾದ ಜಿಲ್ಲಾಧ್ಯಕ್ಷರಾದ ರಾಮಣ್ಣ ನಾಯಕ ತಾಲೂಕ ಪ್ರಧಾನ ಕಾರ್ಯದರ್ಶಿ ಕೊಂಡಯ್ಯ ನಾಯಕ, ಮಾಜಿ ಯೋಧರಾದ ಜೆಲ್ಲಿ ಅಂಜಿನೆಯ್ಯ ನಾಯಕ ಹಾಗೂ ವಾಲ್ಮೀಕಿ ಸಮಾಜದ ಮುಖಂಡರು ಸನ್ಮಾನಿಸಿ ಅಭಿನಂದಿಸಿದರು. ವಿದ್ಯಾರ್ಥಿನಿಯ ಶ್ರಮ, ಕುಟುಂಬದ ಬೆಂಬಲ ಹಾಗೂ ಉಪನ್ಯಾಸಕರ ಮಾರ್ಗದರ್ಶನವೇ ಈ ಸಾಧನೆಗೆ ಕಾರಣವೆಂದು ದುರ್ಗಾಭವಾನಿ ತಿಳಸಿದ್ದಾಳೆ.ಈ ಸಂದರ್ಭದಲ್ಲಿ ಶಿವಶಂಕ್ರಯ್ಯ ಸ್ವಾಮಿ, ಶಂಕರಪ್ಪ ನಕ್ಕುಂದಿ,ಶರಣಪ್ಪ ನಂದಿಹಾಳ ಆಂಜನೇಯ ನಾಯಕ ನಸಲಾಪುರ, ಜಿ.ನರಸಿಂಹ ನಾಯಕ ಕರಡಿಗುಡ್ಡ, ರಾಘವೇಂದ್ರ ನಾಯಕ ಕಪಗಲ್,ಶಿವಕುಮಾರ ನಾಯಕ, ಭೀಮಯ್ಯ ನಾಯಕ, ಹುಲಿರಾಜ್ ನಾಯಕ ಉಪಸ್ಥಿತರಿದ್ದರು.

ಮೊದಲನೇ ಪುಟದಿಂದ

# ಏ.20 ರಂದು ಬಸವಜಯಂತಿ ಕಾರ್ಯಕ್ರಮ: ಭೀಮರಾಯ ಬಿ.ರಾಮಸಮುದ್ರ

ಭಾಗವಹಿಸಬೇಕು ಜಯಂತಿಗಳನ್ನು ಅರ್ಥಪುರ್ಣವಾಗಿ ಆಚರಿಸುವುದಕ್ಕೆ ಸಮಾಜದ ಎಲ್ಲಾ ಸಮುದಾಯದವರು ಸಹಕಾರ ನೀಡಬೇಕು ಎಂದು ಕೋರಿದರು.
ಸಭೆಯಲ್ಲಿ ಅಖಿಲಭಾರತ ವೀರಶೈವ ಲಿಂಗಯಾತ ಮಹಾಸಭಾ ತಾಲೂಕು ಘಟಕದ ಅಧ್ಯಕ್ಷರಾದ ಅರುಣಕುಮಾರಚಂದಾ , ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷರಾದ ಹರಿಹರ ಪಾಟೀಲ್ ,ಕೇದರನಾಥ,ಡಾ.ವಿಜಯರಾವ್ ಕುಪನೇಶಿ ಮಾತನಾಡಿದರು.
ಗ್ರೇಡ್-2 ತಹಶಿಲ್ದಾರ್ ಅಬ್ದುಲ್ ವಾಹಿದ್, ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ, ಪಿ.ಐ, ಸೋಮಶೇಖರ ಎಸ್. ಕೆಂಚರೆಡ್ಡಿ, ತಾ.ಆರೋಗ್ಯಧಿಕಾರಿ ಡಾ.ಶರಣಬಸವರಾಜ, ಮುಖಂಡರಾದ ಜಾನೇಕಲ್ ನರಸಿಂಹಜೋಶಿ, ಶ್ರೀಧರ ಮಾಸ್ಟರ್, ಪ್ರಹ್ಲಾದ್ ಕುರ್ಡಿ, ವರದರಾಜ ಕುಲಕರ್ಣಿ,ನೀರಮಾನ್ವಿ ನರಸಿಂಹ ,ಜಯಾಚಾರ್ ಸೇರಿದಂತೆ ತಾಲೂಕಿನ ವಿವಿಧ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇನ್ನಿತರರು ಇದ್ದರು.

# ತಾಲೂಕು ಆಡಳಿತದಿಂದ ಪಕ್ಷಿಗಳಿಗೆ ನೀರುಣಿಸುವ ತೊಟ್ಟಿಗಳ ವಿತರಣೆ

ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ದೇವಮಾನೆ, ಪಿ.ಐ, ಸೋಮಶೇಖರ ಎಸ್. ಕೆಂಚರೆಡ್ಡಿ, ತಾ.ಆರೋಗ್ಯಧಿಕಾರಿ ಡಾ.ಶರಣಬಸವರಾಜ, ತಾ.ಪಶು ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಬಸವರಾಜ ಹಿರೇಮಠ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.
ವಿವಿಧ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಉಚಿತವಾಗಿ ಪಕ್ಷಿಗಳಿಗೆ ನೀರುಣಿಸುವ ತೊಟ್ಟಿಗಳ ವಿತರಣೆ ಮಾಡಲಾಯಿತು.

# ಮಂತ್ರಿ ಸ್ಥಾನ ಕೇಳಲು ಇದು ಸಮಯುವಲ್ಲ: ಶಿಸ್ತು ಮೀರಿದರೆ ಕ್ರಮ

ಮಾಡೋಣ. ಮಂತ್ರಿಗಳಾಗಬಾರದು ಎಂದೇನಿಲ್ಲಾ. ಈಗ ಮಂತ್ರಿ ಮಾಡು ಅನ್ನೋ ಟೈಂ ಅಲ್ಲ ಎಂದು ಡಿ.ಕೆ. ಶಿವಕುಮಾರ್, ಮಂತ್ರಿ ಸ್ಥಾನಕ್ಕೆ ಬೇಡಿಕೆ ಇಟ್ಟಿರುವ ಹಿರಿಯ ಶಾಸಕರ ವಿರುದ್ಧ ಗರಂ ಆದರು.

ಪಕ್ಷದ ಶಿಸ್ತು ಮೀರಿದರೆ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂಬ ಎಚ್ಚರಿಕೆಯನ್ನೂ ಅವರು ನೀಡಿದರು.
ತಮಿಳುನಾಡಿನ ಚುನಾವಣೆಗೆ ನಾನು ಹೋಗಬೇಕಾಗಿದೆ. ಆ ಬಗ್ಗೆ ಮಾತನಾಡಲು ಎಐಸಿಸಿ ಅಧ್ಯಕ್ಷರನ್ನು ಭೇಟಿ ಮಾಡಿದ್ದೇನೆ. ದೆಹಲಿಗೆ ಕೆಲ ಶಾಸಕರು ಹೋಗಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಕೂಡಾ ಮಾತನಾಡಿದ್ದಾರೆ. ಯಾವುದೇ ಶಾಸಕರು ಪಕ್ಷದ ಶಿಸ್ತನ್ನು ಕಾಪಾಡಬೇಕು. ವರಿಷ್ಠರನ್ನು ಭೇಟಿ ಮಾಡುವುದು ತಪ್ಪಲ್ಲ. ಆದರೆ, ಅನಗತ್ಯ ಹೇಳಿಕೆಗಳನ್ನು ಕೊಟ್ಟರೆ ನಾನು ಕ್ರಮಕೈಗೊಳ್ಳಬೇಕಾಗುತ್ತದೆ ಎಂದರು.

# ಪತ್ರಕರ್ತರು ಸತ್ಯದ ಪರವಾಗಿರಲಿ: ಯು. ಟಿ. ಖಾದರ್ ಸಲಹೆ

ತೋಟವಾಗಿದೆ. ಇಲ್ಲಿ ಪತ್ರಕರ್ತರ ರಾಜ್ಯ ಸಮ್ಮೇಳನ ನಡೆದಿರುವುದು ಸಂತಸ ತಂದಿದೆ ಎಂದರು.
ತನಿಖಾ ಮಾಧ್ಯಮವು ಈಗ ಮರೆಯಾಗುತ್ತಿದೆ. ಈ ಬಗ್ಗೆ ಪತ್ರಕರ್ತರು ಅವಲೋಕನ ಮಾಡಬೇಕು ಎಂದರು.
ಪತ್ರಕರ್ತರಿಗೆ ಸಂರಕ್ಷಣೆ ಕೊಡುವ ವಿಷಯದಲ್ಲಿ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದ ಸಚಿವರು, ಪತ್ರಕರ್ತರು ಮಾಧ್ಯಮದ ಪಾವಿತ್ರ್ಯತೆ ಕಾಪಾಡಬೇಕು. ಈ ಮೂಲಕ ರಾಷ್ಟ್ರದ ಅಭಿವೃದ್ಧಿಗೆ ಉತ್ತಮ ಕೊಡುಗೆ ನೀಡಬೇಕು ಎಂದು ಸಲಹೆ ಮಾಡಿದರು.
ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ ಮಾತನಾಡಿ, ಪತ್ರಿಕೋದ್ಯಮವು ಈಗ ಹೊಸ ತಿರುವು ಪಡೆದಿದೆ. ಮಾಧ್ಯಮವನ್ನು ಕಪಿಮುಷ್ಠಿಯಲ್ಲಿಡಬಾರದು. ವಿರೋಧ ಪಕ್ಷದ ಕಾರ್ಯವನ್ನು ಪತ್ರಿಕೋದ್ಯಮ ಮಾಡಬೇಕು. ಎದೆಗಾರಿಕೆಯಿಂದ, ಧೈರ್ಯದಿಂದ ವೃತ್ತಿ ಮಾಡಿದಾಗ ಪತ್ರಿಕಾವೃತ್ತಿಯ ಘನತೆ ಹೆಚ್ಚಲಿದೆ ಎಂದರು.
ಮಾಜಿ ಸಚಿವ ಬಂಡೆಪ್ಪ ಖಾಶೆಂಪೂರ ಅವರು ಮಾತನಾಡಿ, ಪತ್ರಿಕಾವೃತ್ತಿ ಈಗ ಕಷ್ಟಕರವಾಗಿದೆ. ಹಾಗಾಗಿ ಸರ್ಕಾರ ಪತ್ರಕರ್ತರಿಗೆ ಸ್ಪಂದನೆ ನೀಡಬೇಕು ಎಂದು ಸಲಹೆ ಮಾಡಿದರು. ಪತ್ರಕರ್ತರ ಸಂಘ ಕಟ್ಟಿದ ಡಿವಿಜಿ ಅವರ ಶ್ರಮವನ್ನು ಸ್ಮರಿಸಬೇಕು ಎಂದು ಸಲಹೆ ಮಾಡಿದರು.
ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿ ಮಾತನಾಡಿದರು.
ಸಮಾರಂಭದಲ್ಲಿ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ, ಡಾ.ಸಿದ್ಧಲಿಂಗಪ್ಪ ಪಾಟೀಲ, ಮಾರುತಿರಾವ್ ಮುಳೆ, ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟಸಿಂಗ್, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಮುಖಂಡರಾದ ರಮೇಶ ಪಾಟೀಲ, ಸೋಮನಾಥ ಪಾಟೀಲ, ಶಕುಂತಲಾ ಬೆಲ್ದಾಳೆ, ಸಂಘದ ಜಿಲ್ಲಾ ಅಡಾಕ್ ಸಮಿತಿ ಸದಸ್ಯರಾದ ಅಪ್ಪಾರಾವ್ ಸೌದಿ, ಶಿವಕುಮಾರ ಸ್ವಾಮಿ, ಮಲ್ಲಿಕಾರ್ಜುನ ಬಿರಾದಾರ(ಪರಿಹಾರ), ಸಿದ್ರಾಮಯ್ಯ ಸ್ವಾಮಿ, ಬಸವರಾಜ ಕಾಮಶೆಟ್ಟಿ ಮತ್ತಿತರರು ಇದ್ದರು.
ಸಂಘದ ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಸ್ವಾಗತಿಸಿದರು. ಸುಕನ್ಯಾ ನಿರೂಪಿಸಿದರು. ಸಮಾರಂಭದ ಬಳಿಕ ಪತ್ರಕರ್ತರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

# ಫೈರೋಜ್ ಪಠಾಣ್ ಕುಟುಂಬಕ್ಕೆ ವೈಶಾಲಿ ಸಾಂತ್ವನ



**ಧಾರವಾಡ,ಏ13:** ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾಗಿದ್ದ ದಿವಂಗತ ಪೈರೋಜ್ ಪಠಾಣ್ ಅವರ ನಿವಾಸಕ್ಕೆ ರಾಜ್ಯ ವನ್ಯಜೀವಿ ಮಂಡಳಿ ಸದಸ್ಯೆ ಹಾಗೂ ಶಾಸಕ ವಿನಯ ಕುಲಕರ್ಣಿ ಅವರ ಪುತ್ರಿ ವೈಶಾಲಿ ವಿನಯ ಕುಲಕರ್ಣಿ ಅವರು ಭೇಟಿ ನೀಡಿ, ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ಪೈರೋಜ್ ಪಠಾಣ್ ಅವರ ಅಕಾಲಿಕ ನಿಧನಕ್ಕೆ ತೀವ್ರ ಸಂತಾಪ ಸೂಚಿಸಿದ ವೈಶಾಲಿ ವಿನಯ ಕುಲಕರ್ಣಿ ಅವರು, ಮೃತರ ಕುಟುಂಬದ ಸದಸ್ಯರೊಂದಿಗೆ ಮಾತನಾಡಿ, ಅವರ ದುಃಖದಲ್ಲಿ ನಾವೆಲ್ಲರೂ ಭಾಗಿಯಾಗಿದ್ದೇವೆ. ಪಕ್ಷ ಮತ್ತು ನಮ್ಮ ಕುಟುಂಬದ ವತಿಯಿಂದ ನೀಡಬೇಕಾದ ಎಲ್ಲಾ ರೀತಿಯ ಸಹಕಾರ ಮತ್ತು ಬೆಂಬಲವನ್ನು ನೀಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸ್ಥಳೀಯ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮತ್ತು ಪೈರೋಜ್ ಪಠಾಣ್ ಅವರ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ಕೆಲ್ಲೂರು: ಉಚಿತ ಆರೋಗ್ಯ ತಪಾಸಣಾ ಶಿಬಿರ



**ಜೇವರ್ಗಿ,ಏ.13**-ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಮೀಪದ ಕೆಲ್ಲೂರು ಗ್ರಾಮದಲ್ಲಿ ಕಾಲೇಜಿನ ಐಕ್ಯೂಎಸಿ ಕ್ರಾಸ್ ಘಟಕ ಹಾಗೂ ಕಲ್ಬುರ್ಗಿಯ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಸಹಯೋಗದಲ್ಲಿ ಗ್ರಾಮದ ಗ್ರಾಮಸ್ಥರಿಗಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಏರ್ಪಡಿಸಲಾಗಿತ್ತು.
ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿಗಳಾದ ಅರುಣ್ ಕುಮಾರ್ ಲೋಯಾ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ.ಶಾಂತಾ ಅಷ್ಟಗಿ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಗೌರವ ಕಾರ್ಯದರ್ಶಿ ರವೀಂದ್ರ ಶಾಬಾದಿ, ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ರಕ್ತದಾನ ಸಮಿತಿಯ ಸಂಚಾಲಕ ಡಾ.ಸೈಯದ್ ಸನಾವುಲ್ಲಾ ಮಾತನಾಡಿದರು. ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ತಿಪ್ಪಯ್ಯ ಪತ್ತಿ ಹಾಗೂ ಮಾಜಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಅಮರಣ್ಣಗೌಡ ಉಪಸ್ಥಿತರಿದ್ದರು. ಡಾ. ಖತೇಜಾ ನಸ್ರಿನ್ ಸ್ವಾಗತಿಸಿದರು. ಸಿಬ್ಬಂದಿ ಕಾರ್ಯದರ್ಶಿ ಡಾ.ಖಾಜಾವಲಿ ಈಚನಾಳ ಪ್ರಾಸ್ತಾವಿಕ ಮಾತನಾಡಿದರು. ಎನ್.ಎಸ್.ಎಸ್ ಕಾರ್ಯಕ್ರಮ ಅಧಿಕಾರಿ ಡಾ ಶರಣಪ್ಪ ಗುಂಡಗುರ್ತಿ, ಕುಪೇಂದ್ರ ರಾಥೋಡ್, ಹಾಗೂ ಅಪರ್ಣ ಇನ್ನಿತರ ಅಧ್ಯಾಪಕರು ಅತಿಥಿ ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಈ ಆರೋಗ್ಯ ತಪಾಸಣಾ ಶಿಬಿರದಲ್ಲಿ ಕಲ್ಬುರ್ಗಿಯ ಅಲ್ ಬದರ್ ಆಸ್ಪತ್ರೆ, ಯುನೈಟೆಡ್ ಆಸ್ಪತ್ರೆ ಮತ್ತು ಜೇವರ್ಗಿಯ ಸಾರ್ವಜನಿಕ ಆಸ್ಪತ್ರೆಯ ವೈದ್ಯರುಗಳು ಬಿಪಿ, ಮಧುಮೇಹ, ಕಣ್ಣು ಕಿವಿ, ಮೂಗು, ಗಂಟಲು ರೋಗ ತಜ್ಞರು ಹಾಗೂ ಮೂಳೆ, ಮಕ್ಕಳ ತಜ್ಞರು ಆರೋಗ್ಯ ತಪಾಸಣೆ ನಡೆಸಿ, ಸೂಕ್ತ ಸಲಹೆ ನೀಡಿ ಮಾತ್ರೆಗಳನ್ನು ವಿತರಿಸಿದರು.
180 ಕ್ಕೂ ಅಧಿಕ ಜನರು ಉಚಿತ ಆರೋಗ್ಯ ತಪಾಸಣಾ ಶಿಬಿರದ ಪ್ರಯೋಜನ ಪಡೆದುಕೊಂಡರು. ಪ್ರೊ.ಭೀಮಣ್ಣ ನಿರೂಪಿಸಿದರೆ, ಡಾ.ಎನ್. ಜಿ. ಶ್ರೀಧರ್ ವಂದಿಸಿದರು.

# ರಾತ್ರಿ ವೇಳೆ ಮನೆ ಕಳ್ಳತನ: ಇಬ್ಬರ ಕಳ್ಳರ ಬಂಧನ18.46 ಲಕ್ಷ ರೂ.ಮೌಲ್ಯದ ಚಿನ್ನಾಭರಣ ಜಪ್ತಿ



**ಕಲಬುರಗಿ,ಏ.13**-ಕಾಳಗಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ 8 ಕಳ್ಳತನ ಪ್ರಕರಣಗಳನ್ನು ಪತ್ತೆ ಹಚ್ಚಿ 119 ಗ್ರಾಂ.ಬಂಗಾರದ ಒಡವೆ, 85 ಗ್ರಾಂ.ಬೆಳ್ಳಿ ಆಭರಣ, 28 ಸಾವಿರ ರೂ.ನಗದು ಸೇರಿ 18.46 ಲಕ್ಷ ರೂ.ಮೌಲ್ಯದ ಸ್ವತ್ತನ್ನು ವಶ ಪಡಿಸಿಕೊಳ್ಳಲಾಗಿದೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ನಗರದ ಪೊಲೀಸ್ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ 8 ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಆಳಂದ ತಾಲ್ಲೂಕಿನ ಕೌಂಸರನಾಯಕ ತಾಂಡಾದ ಅಪ್ಪಾಜಿ ಗಂಗಾರಾಮ ಚವ್ಹಾಣ್ (22), ಹೊನ್ನಳ್ಳಿ ತಾಂಡಾದ ಮಿಥುನ್ ಲಕ್ಷ್ಮಣ ಚವ್ಹಾಣ್ (23) ಎಂಬುವವರನ್ನು ಬಂಧಿಸಲಾಗಿದೆ ಎಂದು ತಿಳಿಸಿದರು. ಇವರು ರಾತ್ರಿ ವೇಳೆ ಬೀಗ ಹಾಕಿದ ಮನೆಗಳನ್ನು ಟಾರ್ಗೆಟ್ ಮಾಡಿ ಕಳ್ಳತನ ಮಾಡುತ್ತಿದ್ದರು ಎಂದು ತಿಳಿಸಿದರು.
ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ್, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ, ಕಾಳಗಿ ಸಿಪಿಐ ಜಗದೇವಪ್ಪ ಪಾಳಾ, ಕಾಳಗಿ ಪಿಎಸ್‌ಐ ಹಾಗೂ ಸಿಬ್ಬಂದಿಯನ್ನು ಒಳಗೊಂಡ ತಂಡ ಈ ಕಳ್ಳತನ ಪ್ರಕರಣವನ್ನು ಪತ್ತೆ ಹಚ್ಚಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

# ಛಾಯಾಚಿತ್ರ ಪ್ರದರ್ಶನಗೈದ ಛಾಯಾಗ್ರಾಹಕರಿಗೆ ಸನ್ಮಾನ




**ಬೀದರ್:ಏ.13:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 40ನೇ ರಾಜ್ಯ ಸಮ್ಮೇಳನದ ಅಂಗವಾಗಿ ಬೀದರ ನಗರದ ಝೀರಾ ಕನ್ವೆನ್ಷನ್ ಸಭಾಂಗಣದಲ್ಲಿ ಆಯೋಜಿಸಲಾದ ಭವ್ಯ ಛಾಯಾಚಿತ್ರ ಪ್ರದರ್ಶನವು ಅಪಾರ ಜನಮನ ಸೆಳೆಯುವ ಮೂಲಕ ಯಶಸ್ವಿಯಾಗಿ ನೆರವೇರಿತು. ಈ ಹಿನ್ನೆಲೆಯಲ್ಲಿ ಪ್ರದರ್ಶನದಲ್ಲಿ ಶ್ರಮಿಸಿದ ಛಾಯಾಗ್ರಾಹಕರು ಹಾಗೂ ಆಯೋಜಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ಸನ್ಮಾನ ಸಮಾರಂಭದಲ್ಲಿ ಛಾಯಾಚಿತ್ರ ಪ್ರದರ್ಶನ ಸಮಿತಿಯ ಪ್ರಧಾನ ಸಂಚಾಲಕರಾದ ಗೋಪಿಚಂದ ತಾಂದಳೆ, ಕಲಬುರಗಿಯ ಖ್ಯಾತ ಛಾಯಾಗ್ರಾಹಕ ನಾರಾಯಣ ಜೋಶಿ ಹಾಗೂ ಬಸವಕಲ್ಯಾಣದ ಛಾಯಾಗ್ರಾಹಕ ವೀರಶೇಟ್ಟಿ ಪಾಟೀಲ್ ಅವರನ್ನು ಶಾಲು ಹೊದಿಸಿ, ಹೂಮಾಲೆ ಹಾಕಿ ಮತ್ತು ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಎರಡು ದಿನಗಳ ಕಾಲ ನಡೆದ ಈ ಪ್ರದರ್ಶನದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಯ್ಕೆಗೊಂಡ ಅನೇಕ ಛಾಯಾಚಿತ್ರಗಳು ಪ್ರದರ್ಶನಗೊಂಡು, ಸಾಮಾಜಿಕ, ಸಾಂಸ್ಕೃತಿಕ ಹಾಗೂ ಪ್ರಕೃತಿ ವೈವಿಧ್ಯತೆಯನ್ನು ಮನಮೋಹಕವಾಗಿ ಚಿತ್ರಿಸಿವೆ. ಪ್ರದರ್ಶನಕ್ಕೆ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಸಾವಿರಾರು ಮಂದಿ ಭೇಟಿ ನೀಡಿ ಛಾಯಾಚಿತ್ರಗಳನ್ನು ವೀಕ್ಷಿಸಿದರು.

ಈ ಪ್ರದರ್ಶನಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಚಾಲನೆ ನೀಡಿದ್ದು, ಕಾರ್ಯಕ್ರಮದ ಮಹತ್ವವನ್ನು ಹೆಚ್ಚಿಸಿತು. ಈ ಸಂದರ್ಭದಲ್ಲಿ ಅವರು ಪತ್ರಕರ್ತರ ಸಂಘದ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ಕನ್ನಡಪ್ರಭ ಸಂಪಾದಕ ರವಿ ಹೆಗಡೆ, ಆನಂದ ದೇವಪ್ಪಾ, ಅಪ್ಪಾರಾವ ಸೌದಿ, ಶಿವಕುಮಾರ ಸ್ವಾಮಿ, ಭವಾನಿಸಿಂಗ್ ಠಾಕೂರ್ ಸೇರಿದಂತೆ ಹಲವು ಗಣ್ಯರು, ಪತ್ರಕರ್ತರು ಹಾಗೂ ಛಾಯಾಗ್ರಾಹಕರು ಉಪಸ್ಥಿತರಿದ್ದರು.

ಈ ಸನ್ಮಾನ ಸಮಾರಂಭವು ಛಾಯಾಗ್ರಾಹಕರ ಪರಿಶ್ರಮವನ್ನು ಗುರುತಿಸುವುದರೊಂದಿಗೆ, ಭವಿಷ್ಯದಲ್ಲಿ ಇನ್ನಷ್ಟು ಉತ್ತಮ ಸೃಜನಾತ್ಮಕ ಕಾರ್ಯಗಳಿಗೆ ಪ್ರೇರಣೆಯಾಗಿದೆ.
ಈ ಪ್ರದರ್ಶನದಲ್ಲಿ ಬೀದರ ಜಿಲ್ಲೆಯಿಂದ ಪತ್ರಿಕಾ ಛಾಯಾಗ್ರಾಹಕರಾದ ಗೋಪಿಚಂದ ತಾಂದಳೆ, ವಿಜಯವಾಣಿ ಜಿಲ್ಲಾ ಛಾಯಾಗ್ರಾಹಕರಾದ ಶ್ರವಣಕುಮಾರ ಮೇತ್ರೆ, ಪ್ರಜಾವಾಣಿ ಜಿಲ್ಲಾ ಛಾಯಾಗ್ರಾಹಕರಾದ ಲೋಕೇಶ ಬಿರಾದಾರ ಹಾಗೂ ಬಸವಕಲ್ಯಾಣದ ಛಾಯಾಗ್ರಾಹಕರಾದ ವೀರಶೆಟ್ಟಿ ಪಾಟೀಲ್ ಅವರ ಛಾಯಾಚಿತ್ರಗಳು ಪ್ರದರ್ಶನಕ್ಕಿಡಲಾಗಿತ್ತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಖರ್ಗೆ ವಿರುದ್ಧ ನಿಂದನಾತ್ಮಕ ಹೇಳಿಕೆ: ಸಿದ್ದು ಕೆರೂರ ಖಂಡನೆ



**ಜೇವರ್ಗಿ,ಏ.13–**ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಅಸ್ಸಾಂ ಮುಖ್ಯಮಂತ್ರಿ ಹಿಮಂತ್ ಬಿಸ್ವಾ ಶರ್ಮಾ ನೀಡಿದ ನಿಂದನಾತ್ಮಕ ಹೇಳಿಕೆಯನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ತಾಲೂಕ ಸಂಚಾಲಕ ಸಿದ್ದು ಕೆರೂರ ಖಂಡಿಸಿದ್ದಾರೆ.

ಬಡ ದಲಿತ ಕುಟುಂಬದಿಂದ ಬೆಳೆದು ಬಂದ 50 ವರ್ಷಗಳ ಕಾಲ ರಾಜಕೀಯ ಹಾಗೂ ಸಾಮಾಜಿಕ ಸೇವೆಯಲ್ಲಿ ತೊಡಗಿರುವ ಖರ್ಗೆ ಅವರಂತಹ ಹಿರಿಯ ನಾಯಕರ ಬಗ್ಗೆ ಹಿಮಂತ ಬಿಸ್ವಾ ಶರ್ಮಾ ಅವರು ವ್ಯಕ್ತಿಗತ ಅವಮಾನ ಮಾಡುವ ರೀತಿಯ ಹೇಳಿಕೆ ನೀಡಿರುವುದು ಖಂಡನೀಯವಾಗಿದೆ.

ಪ್ರಜಾಪ್ರಭುತ್ವದಲ್ಲಿ ಭಿನ್ನಾಭಿಪ್ರಾಯಗಳು ಸಹಜವಾದರೂ, ವ್ಯಕ್ತಿ ಗೌರವ ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಹಿಮಂತ್ ಬಿಸ್ವಾ ಶರ್ಮಾ ಅವರ ಹೇಳಿಕೆ ಕೇವಲ ಖರ್ಗೆ ಅವರಿಗೆ ಮಾತ್ರವಲ್ಲ, ಇಡೀ ದಲಿತ ಸಮುದಾಯಕ್ಕೆ ಮಾಡಿದ ಅವಮಾನವಾಗಿದೆ. ಅವರು ತಕ್ಷಣವೇ ಕ್ಷಮೆಯಾಚಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

# ಖಜೂರಿ ಶ್ರೀ ಕೋರಣೇಶ್ವರ ಜಾತ್ರೆ ಸಪ್ತಾಹ ಆರಂಭ, ಉತ್ಸವಕ್ಕೆ ಭರದ ಸಿದ್ಧತೆ



**ಆಳಂದ:ಏ.13:** ತಾಲೂಕಿನ ಹೋಬಳಿ ಕೇಂದ್ರ ಖಜೂರಿ ಗ್ರಾಮದ ಆರಾಧ್ಯ ದೈವ ಶ್ರೀ ಕೋರಣೇಶ್ವರ ವಿರಕ್ತ ಮಠದ ಶ್ರೀ ಕೋರಣೇಶ್ವರರ ಜಾತ್ರ ಮಹೋತ್ಸವ ಏ. 11ರಂದು ಆರಂಭಗೊಂಡು ಏ. 18ರವರೆಗಿನ ಅವಧಿಯಲ್ಲಿ ಪಲ್ಲಕ್ಕಿ ಉತ್ಸವ, ಮಹಾರಥೋತ್ಸವ ಹಾಗೂ ಕುಸ್ತಿ ಗೀ ಗೀ ಪದಗಳು ಸೇರಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಎಂದಿನಂತೆ ಶ್ರೀಮಠದ ಉಸ್ತವಾರಿಗಳಾದ ಗುರುಮಿಠಕಲ್ ಖಾಸಾಮಠದ ಗುರು ಮುರುಘರಾಜೇಂದ್ರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಭರದ ಸಿದ್ಧತೆ ಆರಂಭಗೊಂಡಿದೆ.

ಈ ಕುರಿತು ಖಜೂರಿ ಕೋರಣೇಶ್ವರ ಮಠದಲ್ಲಿ ಕಮೀಟಿ ಹಾಗೂ ಜಾತ್ರಾ ಸಮಿತಿಯ ಪ್ರಮುಖರ ಜಾತ್ರಾ ವಾಲ್‌ಪೋಸ್ಟರ್ ಬಿಡುಗಡೆಗೊಳಿಡಿಸಿ ಉತ್ಸವದ ವಿವರಣೆ ನೀಡಿದ ಅವರು, ಎಂದಿನಂತೆ ನೆರೆ ಹೊರೆಯ ಗ್ರಾಮಗಳ ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ದರ್ಶನಾಶೀರ್ವಾದ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಏ.11ರಂದು ಸಪ್ತಾಹ ಆರಂಭಗೊಂಡಿದ್ದು, ಪ್ರತಿ ದಿನ ಭಜನೆ ದಾಸೋಹ ಕರ್ತೃ ಗದ್ದುಗೆಗೆ ರುದ್ರಾಭಿಷೇಕ ದೊಂದಿಗೆ ಏ. 16ರಂದು ಗುರುವಾರ ಸಂಜೆ ಮಹಾ ಪೂಜೆ ಕುಂಭ ಕಳಸ ಡೊಳ್ಳು ನಾಗ ಸಾದುಗಳ ಕುಣಿತ ದೊಂದಿಗೆ ಲಿಂ. ಶ್ರೀ ಕೊರಣೇಶ್ವರ ಮಹಾ ಸ್ವಾಮಿಗಳ ಭವ್ಯ ಮೂರ್ತಿ ಹಾಗೂ ನಂದಿಕೋಲ ಮಹಾಪೂಜೆ ಮೆರವಣಿಗೆಯೊಂದಿಗೆ ಗೊಂಬೆ ಕುಣಿತ, ವಾದ್ಯ ವೈಭಗಳೊಂದಿಗೆ ಗ್ರಾಮದ ಪ್ರಮುಖ ಬಿದಿಯಿಂದ ಶ್ರೀಮಠ ತಲುಪುವದು ಏ.17ರಂದು ಶುಕ್ರವಾರ ಬೆಳಗಿನ ಜಾವ ಗದ್ದುಗೆಗೆ ವಿಶೇಷ ಪೂಜೆ, ಮತ್ತು ರಥಕ್ಕೆಕಳಸಾರೋಹಣ ನಂತರ 8:00ಗಂಟೆಗೆ ಅಗ್ನಿ ಹಾಯುವುದು ಸಂಜೆ 6:35 ಗಂಟೆಗೆ93ನೇ ಭವ್ಯ ರಥೋತ್ಸವ, ರಾತ್ರಿ ಬಿಜಾಪೂರದ ಬಬಲೇಶ್ವರ ತಾಲೂಕಿನ ಗೆಣ್ಣೂರದ ಸುಜಾತಾ ದೇವರ ಮತ್ತು ಅಥಣಿಯ ಚಂದ್ರಕಾಂತ ಬಾಳಗೇರಿ ಕಲಾವಿದರಿಂದ ಗೀ ಗೀ ಪದ ಜರುಗಲಿವೆ ಎಂದು ಹೇಳಿದರು.

18ರಂದು ಮಧ್ಯಾಹ್ನ ಕರ್ನಾಟಕ ಹಾಗೂ ಮಹಾರಾಷ್ಟ್ರ ಗಡಿನಾಡಿನ ಜಂಗಿ ಪೈಲ್ವಾನರ ಕುಸ್ತಿ, ವಿಜೇತರಿಗೆ 111 ರೂ.ಗಳಿಂದ 15 ಸಾವಿರ ವರೆಗೆ ಬಹುಮಾನದ ವಿತರಣೆ, ಸಂಜೆ 7:00ಗಂಟೆಗೆ ಲಕ್ಷ ದಿಪೋತ್ಸ ಮತ್ತು ಮದ್ದು ಸುಡುವ ಕಾರ್ಯಕ್ರಮ ಜರುಗಲಿದೆ. ಈ ಜಾತ್ರಾ ಉತ್ಸವದಲ್ಲಿ ನಾಡಿನ ಎಲ್ಲ ಸದ್ಭಕ್ತಾದಿಗಳು ಜಾತ್ರೆಗೆ ಬಂದು ತನು ಮನ ಧನ ದಿಂದ ಸೇವೆ ಸಲ್ಲಿಸಿ ಕೊರಣೇಶ್ವರ ಅಜ್ಜನ ಆಶೀರ್ವಾದ ಪಡೆದುಕೊಂಡು ಪ್ರಸಾದ ಸ್ವೀಕರಿಸಿ ಪುನೀತರಾಗಬೇಕು ಕೋರಣೇಶ್ವರ ದೇವಸ್ಥಾನ ಟ್ರಸ್ಟ್ ಕಮೀಟಿ ಅಧ್ಯಕ್ಷ ಭೀಮರಾವ್ ಢಗೆ, ಉಪಾಧ್ಯಕ್ಷ ಕಬಸಪ್ಪ ಸುಲ್ತಾನಪೂರೆ, ಅಶೋಕ ಸಾವಳೇಶ್ವರ, ಶ್ರೀಶೈಲ ಎಸ್. ಬಂಗರಗೆ, ಅಶೋಕ ಬಿ. ಹೊಸಮನಿ, ಮಲ್ಲಣ್ಣಾ ಎನ್. ಹೆಬಳೆ, ತಿಪ್ಪಣಾ ಎಸ್. ಬಂಡೆ, ಶಿವಬಸಪ್ಪಾ ಆರ್. ಶಿವಶೆಟ್ಟಿ, ದಯಾನಂದ ಅಲ್ದಿ, ಮತ್ತು ಜಾತ್ರಾ ಕಮೀಟಿ ಅಧ್ಯಕ್ಷ ವಿಜಯಕುಮಾರ ಅಲ್ದಿ, ಮಹಾಂತೇಶ ಅಲ್ದಿ ಹಾಗೂ ಹಣಮಂತ ಸಾವಳೇಶ್ವರ, ವೈಜನಾಥ ವಾಡೆ ಸೇರಿದಂತೆ ಸಕಲ ಗ್ರಾಮದ ಭಕ್ತಾದಿಗಳು ಮನವಿ ಮಾಡಿದ್ದಾರೆ.

# ಮಹಾತ್ಮ ಜ್ಯೋತಿಬಾ ಫುಲೆ ಆದರ್ಶ ನಮಗೆ ದಾರಿದೀಪ :ಗಾಯಕ್ವಾಡ್



**ಜೇವರ್ಗಿ:ಏ.13:**ಮಹಾತ್ಮ ಜ್ಯೋತಿಬಾ ಫುಲೆ ಆದರ್ಶ ನಮಗೆ ದಾರಿದೀಪ ಎಂದು ಡಾ. ಅಂಬೇಡ್ಕರ ಜಯಂತೋತ್ಸವ ಸಂತಿ ಅಧ್ಯಕ್ಷ ಪುಂಡಲೀಕ್ ಗಾಯಕ್ವಾಡ್ ಹೇಳಿದರು ಮಹಾತ್ಮ ಜ್ಯೋತಿಬಾ ಫುಲೆ ಜಯಂತಿ ಪಟ್ಟಣದ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಭವನದಲ್ಲಿ ಆಚರಣೆ ಮಾಡಲಾಯಿತು ನಂತರ ನಡೆದ ಕಾರ್ಯಕ್ರಮಉದ್ದೇಸಿ ಮಾತನಾಡಿದ ದಲಿತ ಮುಖಂಡ ಭೀಮರಾಯ ನಗನೂರು ಮಾತನಾಡುತ್ತಾ ಜ್ಯೋತಿಬಾಪುಲೆಯರ ಆದರ್ಶಗಳು ನಮ್ಮ ಯುವ ಜನಾಂಗಕ್ಕೆ ಅಳವಡಿಸಿಕೊಳ್ಳಬೇಕೆಂದರು ಸಂದರ್ಭದಲ್ಲಿ ದಲಿತ ಮುಖಂಡರಾದ ಶ್ರೀಹರಿ ಕರ್ಕಳಿ ಮಲ್ಲಮ್ಮ ಕೊಬ್ಬಿನ ಸಿದ್ದು ಕೆರೂರು ರವಿ ಕುಳಗೇರಿ ಮಾಪಣ್ಣ ಕಟ್ಟಿ ಸುರೇಶ್ ಡೂಗನ ಕರ್ ಸಿದ್ದಪ್ಪ ಆಲೂರು ಸುಭಾಷ್ ಕೊಬ್ಬಿನ ಸೇರಿದಂತೆ ಅನೇಕರಿದ್ದರು

# ದೇಹದ ಜೊತೆ ಮನಸ್ಸನ್ನು ಶುದ್ದಿಗೊಳಿಸುವ ಸಾಧನ ಸುದರ್ಶನ ಕ್ರಿಯೆ:ಶಿಲ್ಪಾ ಅವಂಟಿ



**ಕೆಂಭಾವಿ:ಏ.13:**ಇಂದಿನ ಆಧುನಿಕ ಜಗತ್ತಿನ ಕಾಲಘಟ್ಟದಲ್ಲಿ ಮನುಷ್ಯ ಬಹಳಷ್ಟು ಒತ್ತಡದ ಜೀವನ ಸಾಗಿಸುತ್ತಿದ್ದಾನೆ ಸದೃಢ ದೇಹದಲ್ಲಿ ಸದೃಢ ಮನಸ್ಸಿರುತ್ತದೆ. ಮನಸ್ಸು ಸದೃಢವಾಗಿರಬೇಕು ಎಂದರೆ ಯೋಗ, ಪ್ರಾಣಾಯಾಮ ಅತ್ಯವಶ್ಯ ಎಂದು ಆರ್ಟ್ ಆಫ್ ಲೀವಿಂಗ್‌ನ ಯಾದಗಿರಿ ಜಿಲ್ಲಾ ಶಿಕ್ಷಕಿ ಶಿಲ್ಪಾ ಅವಂಟಿ ಹೇಳಿದರು.

ಪಟ್ಟಣದ ಸೌ.ಲಕ್ಷ್ಮೀದೇವಿ ವಾಮನರಾವ ದೇಶಪಾಂಡೆ ಸಭಾ ಭವನದಲ್ಲಿ ಆರ್ಟ್ ಆಫ್ ಲೀವಿಂಗ್ ವತಿಯಿಂದ ಹಮ್ಮಿಕೊಂಡಿದ್ದ ಸಂತೋಷದ ಅನುಭೂತಿ (ಹ್ಯಾಪಿನೆಸ್ ಪ್ರೋಗ್ರಾಂ) ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ದೈನಂದಿನ ಬದುಕಿನಲ್ಲಿ ಜನರು ಆರೋಗ್ಯದ ಕಡೆಗೆ ಗಮನ ಕೊಡುತ್ತಿಲ್ಲ. ಆರೋಗ್ಯವೆ ಭಾಗ್ಯ ಎನ್ನುವದನ್ನು ಮರೆತು ಹೋಗುತ್ತಿದ್ದಾರೆ. ದೇಹದ ಜೊತೆಗೆ ಮನಸ್ಸನ್ನು ಶುದ್ಧಿಗೊಳಿಸಲು ಶ್ರೀ ರವಿಶಂಕರ ಗುರುಜಿಯವರು ಸುದರ್ಶನ ಕ್ರಿಯೆಯನ್ನು ಜಗತ್ತಿನಾದ್ಯಂತ ಪ್ರಚುರಗೊಳಿಸಿದರು. ಆರ್ಟ್ ಆಫ್ ಲೀವಿಂಗ್ ವತಿಯಿಂದ ದೇಹ, ಮನಸ್ಸು, ಬುದ್ದಿ ಹಾಗೂ ಪ್ರಾಣದ ಕಡೆಗೆ ಹೇಗೆ ಹೆಚ್ಚು ಗಮನ ಕೊಡಬಹುದು ಎಂದು ತಿಳಿಸಲಾಗುತ್ತದೆ.

ಆರು ದಿನಗಳ ಕಾಲ ಸುಮಾರು 30 ಶಿಬಿರಾರ್ಥಿಗಳಿಗೆ ಸುದರ್ಶನ ಕ್ರಿಯೆ ಕಲಿಸಿಕೊಟ್ಟು ಮಾತನಾಡಿದ ಶಿಕ್ಷಕಿ ಸಿದ್ದಮ್ಮ ಅವರು, ದಿನದ ಒಂದಿಷ್ಟು ಸಮಯ ನಮಗಾಗಿ ಸಮಯವನ್ನು ಮೀಸಲಿಡಬೇಕು. ಯೋಗ, ಪ್ರಾಣಾಯಾಮ ಸೇರಿದಂತೆ ಕೆಲಹೊತ್ತು ದೈಹಿಕ ಕಸರತ್ತು ನಡೆಸಬೇಕು. ಆರ್ಟ್ ಆಫ್ ಲೀವಿಂಗ್ ವತಿಯಿಂದ ಮನಸ್ಸನ್ನು ಶಾಂತಗೊಳಿಸಿ, ಆಂತರಿಕ ಸಮತೋಲನವನ್ನು ಹೆಚ್ಚಿಸುವ ಅನೇಕ ಮಾರ್ಗಗಳನ್ನು ತಿಳಿಸಿ ಕೊಡಲಾಗುತ್ತದೆ. ಆಧ್ಯಾತ್ಮದಿಂದ ಮಾತ್ರ ನಾವು ಮನಸ್ಸನ್ನು ನಿಯಂತ್ರಿಸಲು ಸಾಧ್ಯ ಎಂದು ತಿಳಿಸಿದರು.

ಯೋಗ, ಆಧ್ಯಾತ್ಮಿಕತೆ, ಸನಾತನ ಧರ್ಮ ಪರಂಪರೆಯನ್ನು ಉಳಿಸಿ ಬೆಳೆಸಲು ಪಿಎಲ್‌ಡಿ ಬ್ಯಾಂಕ್ ನಿರ್ದೇಶಕರಾದ ವಾಮನರಾವ ದೇಶಪಾಂಡೆ ಕರೆ ನೀಡಿದರು. ನಿವೃತ್ತ ಉಪನ್ಯಾಸಕ ನರಸಿಂಹರಾವ ಕುಲಕರ್ಣಿ ಯೋಗಾರ್ಥಿಗಳನ್ನು ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಸಂಜೀವರಾವ ಕುಲಕರ್ಣಿ, ಜಯಶ್ರೀ ಹಿರೇಮಠ, ನವೀನ, ಸಿಎಚ್ ಶ್ರೀನಿವಾಸ, ರಾಘವೇಂದ್ರ, ಆಂಜನೇಯ, ಪ್ರಭು ಅಂಗಡಿ, ಗುಡದಯ್ಯ ದಾವಣಗೇರಿ, ದೇವು ಯಾಳಗಿ, ಸತೀಶ, ಮಂಜುನಾಥ, ಶಿವರಾಜ ಬೂದುರ, ವೀರಣ್ಣ ಕಲಕೇರಿ, ಯಂಕನಗೌಡ ಪಾಟೀಲ, ವಿಜಯಾಚಾರ್ಯ ಪುರೋಹಿತ, ಬಲಭೀಮರೆಡ್ಡಿ ಡಿಗ್ಗಾವಿ, ಶಿವಾನಂದಸ್ವಾಮಿ ಹಿರೇಮಠ, ಮಲ್ಲನಗೌಡ ಪಾಟೀಲ, ರಮೇಶ ಅಂಗಡಿ, ಸುಜಾತಾ.ಎನ್, ವೆಂಗಮಾಂಬಾ ಶ್ರೀನಿವಾಸ, ಕಲ್ಪನಾ ನವೀನ ಸೇರಿದಂತೆ ಇತರರಿದ್ದರು.

ಡಿ.ಸಿ.ಪಾಟೀಲ ನಿರೂಪಿಸಿದರು. ಮೋಹನರೆಡ್ಡಿ ಡಿಗ್ಗಾವಿ ಸ್ವಾಗತಿಸಿದರು. ರೇವಣಸಿದ್ದಯ್ಯ ವಂದಿಸಿದರು.


# ಆಶಾ ಭೋಸ್ಲೆ ನಿಧನಕ್ಕೆ ಸಂತಾಪ



**ತಾಳಿಕೋಟೆ :ಏ.13:** ಪ್ರಸಿದ್ಧ ಭಾರತೀಯ ಹಿನ್ನೆಲೆ ಗಾಯಕಿ ಆಶಾ ಭೋಸ್ಲೆ ಅವರ ನಿಧನಕ್ಕೆ ಹಿರೂರ ಶ್ರೀ ಅನ್ನದಾನೇಶ್ವರ ಮಠದ ಪಟ್ಟಾದೀಶರಾದ ಶ್ರೀ ಗುರುಜಯಸಿದ್ದೇಶ್ವರ ಮಹಾಸ್ವಾಮಿಗಳು ಸಂತಾಪ ಸೂಚಿಸಿದ್ದಾರೆ.

ಆಶಾ ಭೊಸ್ಲೆ ಅವರು ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ವಿಜೇತರು ಮತ್ತು ಬಾಲಿವುಡ್‌ನ ಗಾನ ಕೋಗಿಲೆ ಎಂದೇ ಖ್ಯಾತರಾಗಿದ್ದ ಅವರು ಅನೇಕ ದಶಕಗಳ ಕಾಲ ಚಿತ್ರರಂಗದಲ್ಲಿ ಸೇವೆ ಸಲ್ಲಿಸಿ ಅವರು, ಭಿನ್ನ ಶೈಲಿಯ ಹಾಡುಗಳಿಗೆ ಹೆಸರುವಾಸಿಯಾಗಿದ್ದರು ಇಪ್ಪತ್ತು ಭಾಷೆಗಳಲ್ಲಿ 12,000 ಹಾಡುಗಳನ್ನು ಹಾಡಿದ ಧೀಮಂತೆಯಾಗಿದ್ದವರು. ಅವರ ಅಗಕೆಯಿಂದ ಗಾನ ಕೋಗಿಲೆ ಧ್ವನಿ ನಿಂತಂತಾಗಿದೆ ಎಂದು ಅವರು ತಿಳಿಸಿದ್ದಾರೆ.

# ಆಶಾ ಭೋಸ್ಲೆ ನಿಧನಕ್ಕೆ ಕರ್ನಾಟಕ ಕಲಾ ಸಂಘ ಸಂತಾಪ



**ವಿಜಯಪುರ, ಏ. 13:**ಖ್ಯಾತ ಗಾಯಕಿ ಆಶಾ ಭೋಸ್ಲೆ ಅವರ ನಿಧನಕ್ಕೆ ಕರ್ನಾಟಕ ಕಲಾ ಸಂಘ ಸಂತಾಪ ವ್ಯಕ್ತಪಡಿಸಿದೆ.

ತಮ್ಮದೇ ಆದ ಮಾಧುರ್ಯಭರಿತ, ಧ್ವನಿಯಿಂದ ಅಪಾರ ಜನಪ್ರಿಯತೆ ಪಡೆದಿದ್ದ, ಭಾರತೀಯ ಚಿತ್ರರಂಗದ ದಂತಕತೆ, ಹಿರಿಯ ಗಾಯಕಿ ಆಶಾ ಭೋಸ್ಲೆ ಅವರು ಕನ್ನಡ ಸೇರಿ ವಿವಿಧ 20 ಭಾಷೆಗಳಲ್ಲಿ 12000 ಹಾಡುಗಳನ್ನು ಹಾಡುವ ಮೂಲಕ ಪದ್ಮಭೂಷಣ, ಬಾಬಾಸಾಹೇಬ ಫಾಲ್ಕೆ ಪ್ರಶಸ್ತಿ ಹಾಗೂ ಗಿನ್ನೀಸ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ತನ್ನ ಹೆಸರು ಸೇರುವಂತೆ ಮಾಡಿದ್ದಾರೆ. ದೇಶದ ಹೆಸರಾಂತ ಗಾಯಕ ದೀನಾನಾಥ ಮಂಗೇಶ್ಕರ ಅವರ ಪುತ್ರಿಯಾಗಿ, ಲತಾ ಮಂಗೇಶ್ಕರ ಅವರ ಸಹೋದರಿಯಾಗಿ ಭಾರತೀಯ ಚಿತ್ರರಂಗದಲ್ಲಿ ತನ್ನ ಹೆಸರು ಚಿತ್ರ ಪ್ರೇಮಿಗಳ ಮನದಲ್ಲಿ ಶಾಶ್ವತವಾಗಿ ನೆಲೆಸುವಂತಹ ಗಾಯಕಿಯಾಗಿದ್ದ ಅವರ ನಿಧನಕ್ಕೆ ಕರ್ನಾಟಕ ಕಲಾ ಸಂಘದ ಅಧ್ಯಕ್ಷ ಬಾಬುರಾವ ಕುಲಕರ್ಣಿ ಅವರು ಸಂತಾಪ ಸೂಚಿಸಿದ್ದಾರೆ.

ಸದಸ್ಯರುಗಳಾದ ರಾಜಶೇಖರ ಕಲ್ಮಠ, ಡಾ. ಬಿ.ಎಸ್. ಕಳ್ಳಿಮಠ, ಕಲ್ಯಾಣರಾವ್ ದೇಶಪಾಂಡೆ, ವಸಂತರಾವ ಕೊರ್ತಿ, ಪ್ರಕಾಶ ಇನಾಮದಾರ, ಬಿ.ಎಸ್. ಸಜ್ಜನ, ದಾನೇಶ ಅವಟಿ, ಡಾ. ಯಲಗೋಡ, ಪ್ರಕಾಶ ಆರ್. ಕುಲಕರ್ಣಿ, ರಾಮಚಂದ್ರ ದೀಕ್ಷಿತ, ಎಂ.ಏ.ಸಿಂಧೆ, ಆನಂದ ಎಂ.ಕುಲಕರ್ಣಿ, ಉಲ್ಲಾಸ ಪಾಟೀಲ, ಸುಧೀಂದ್ರ ರಾಘವೇಂದ್ರ ಜಕಾತಿ ಭಾರತೀಯ ಚಿತ್ರ ರಸಿಕರು ಮರೆಯಲಾಗದ ಆಶಾ ಭೋಸ್ಲೆ ಅವರ ನಿಧನ ನಮ್ಮೆಲ್ಲರ ಮನದಲ್ಲಿ ಸದಾಕಾಲ ಉಳಿಯುವಂತಹದು. ಅವರ ಮಾಧುರ್ಯಭರಿತ ಹಾಡುಗಳನ್ನು ಕೇಳುವುದೇ ನಮಗೆ ಖುಷಿ ನೀಡುವಂತಹದಾಗಿತ್ತು, ಮರೆಯಲಾಗದ ವ್ಯಕ್ತಿತ್ವದ ಆಶಾ ಭೋಸ್ಲೆ ನಿಧನಕ್ಕಾಗಿ ಶೋಕ ವ್ಯಕ್ತಪಡಿಸಿದ್ದಾರೆ.

# ಬಸವೇಶ್ವರ ಜಯಂತಿ ಆಮಂತ್ರಣ ಪತ್ರಿಕೆ ಬಿಡುಗಡೆ ಮಾಡಿದ ಶಾಸಕ ಲಕ್ಷ್ಮಣ ಸವದಿ



**ಅಥಣಿ :ಏ.13:** ಸಮಾನತೆಯ ಹರಿಕಾರ, ವಿಶ್ವಗುರು ಜಗಜ್ಯೋತಿ ಬಸವಣ್ಣನವರ ತತ್ವ ಸಿದ್ಧಾಂತಗಳು, ಅವರ ಶೋಷಣೆ ಮುಕ್ತ ಸಮಾಜ ನಿರ್ಮಾಣದ ಕನಸು, 12ನೇ ಶತಮಾನದಲ್ಲಿಯೇ ಮಾಡಿದ ಕ್ರಾಂತಿಕಾರಕ ಬದಲಾವಣೆಗಳು. ಸಮಾಜದಲ್ಲಿ ಸಮಾನತೆ, ಸೌಹಾರ್ದತೆ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಲು ಅವರ ಸಂದೇಶಗಳು ದಾರಿದೀಪವಾಗಿವೆ ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ರವಿವಾರ ಪಟ್ಟಣದ ತಮ್ಮ ಗೃಹ ಕಛೇರಿಯಲ್ಲಿ ಬಸವೇಶ್ವರ ಕಮಿಟಿ ಸದಸ್ಯರಿಂದ ವಿಶ್ವಗುರು ಬಸವೇಶ್ವರ ಜಯಂತಿ ಪ್ರಯುಕ್ತ ಸಮಾರಂಭದ ಆಮಂತ್ರಣ ಪತ್ರಿಕೆಗಳನ್ನು ಬಿಡುಗಡೆ ಮಾಡಿ ಮಾತನಾಡಿದರು. ಬಸವೇಶ್ವರರು ಸಾರಿದ "ಕಾಯಕವೇ ಕೈಲಾಸ" ಎಂಬ ತತ್ವವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಬದುಕಿನಲ್ಲಿ ಯಶಸ್ಸು ಸಾಧಿಸಬೇಕು. "ಇವನಾರವ, ಇವನಾರವ, ಎಂದೆನಿಸದೆ ಇವ ನಮ್ಮವ ಇವ ನಮ್ಮವ" ಎನ್ನುವಂತಹ ಅದ್ಭುತವಾದ ಮಾನವೀಯ ಮೌಲ್ಯಗಳ ನಿಧಿಯನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡುವ ಮೂಲಕ ಬಸವಣ್ಣನವರು ಸಮಾಜದಲ್ಲಿನ ಜಾತಿ, ಬೇಧಭಾವ ಹಾಗೂ ಅಸಮಾನತೆಯನ್ನು ಹೋಗಲಾಡಿಸಲು ಮತ್ತು ಎಲ್ಲರಲ್ಲಿಯೂ ಸಮಾತನೆಯನ್ನು ಬೆಳೆಸುವಲ್ಲಿ ಪ್ರಾಮಾಣಿಕರಾಗಿ ಶ್ರಮಿಸಿದ್ದು, ಇಂಥಹ ಮಹಾನ್ ಶರಣರು ಸತ್ಪುರುಷರು ಇಂದಿನ ಯುವ ಪೀಳಿಗೆಗೆ ಮಾದರಿಯಾಗಿದ್ದಾರೆ. ಅವರ ತತ್ವಾದರ್ಶಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿ ಆಚರಣೆ ಸಾರ್ಥಕತೆ ಪಡೆಯುತ್ತದೆ ಎಂದರು "ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸುವುದು" ಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ವಿಜೃಂಭಣೆಯಿಂದ ಆಚರಿಸುವುದು ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಭಕ್ತಿ ಪೂರ್ಣ ಕಾರ್ಯಕ್ರಮಗಳು ಹಾಗೂ ಸಮಾಜ ಸೇವಾ ಚಟುವಟಿಕೆಗಳನ್ನು ಆಯೋಜಿಸಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಬೇಕೆಂದು ಅವರು ಮನವಿ ಮಾಡಿದರು. ಈ ವೇಳೆ ಅಧ್ಯಕ್ಷ ಎಸ್ ಆರ್ ಘೋಳಪ್ಪನವರ, ಮುಖಂಡರಾದ ಶ್ರೀಶೈಲ ನಾಯಿಕ, ಶಿವಾನಂದ ಹುನ್ನೂರ, ರಮೇಶ್ ಕಾಗಲೆ, ಮಾರುತಿ ಐಗಳಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಹೊಸ ಜಾಹೀರಾತು ನೀತಿಯಲ್ಲಿದ್ದ ಕೆಲ ನಿಯಮಗಳನ್ನು ತೆಗೆದು ಹಾಕುವಂತೆ ಸರ್ಕಾರಕ್ಕೆ ಒತ್ತಡ ಹೇರಲು ವಿರೋಧ ಪಕ್ಷದ ನಾಯಕರಿಗೆ ಮನವಿ




**ಬೀದರ ಎ.13:** ಇತ್ತೀಚಿಗೆ ಕರ್ನಾಟಕ ರಾಜ್ಯ ಸರ್ಕಾರವು 2026 ಹೊಸಜಾಹೀರಾತು ನೀತಿಯನ್ನು ಸಚಿವ ಸಂಪುಟದಲ್ಲಿ ಒಪ್ಪಿಗೆ ನೀಡಿದ್ದು ಈಗ ಜಾರಿಯಾಗುವ ಹಂತದಲ್ಲಿದೆ. ಈ ಜಾಹೀರಾತು ನೀತಿಯಲ್ಲಿ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳಿಗೆ ಹಲವಾರು ಕಠಿಣ ನಿಯಮಗಳನ್ನು ಜಾರಿಗೆ ತರಲಾಗುತ್ತಿದ್ದು ಇದರಿಂದ ಮುಂದಿನ ದಿನಗಳಲ್ಲಿ ಈ ಪತ್ರಿಕೆಗಳ ಅಸ್ತಿತ್ವಕ್ಕೆ ಮತ್ತು ಮುಂದುವರಿಕೆ ಅಸಾಧ್ಯ ವಾಗುವ ಸಂಪೂರ್ಣ ಸಾಧ್ಯತೆ ಇದೆ ಹೀಗಾಗಿ ಈ ನೀತಿಯಲ್ಲಿದ್ದ ಕೆಲ ನಿಯಮಗ ಳು ತಕ್ಷಣಕ್ಕೆ ಹಿಂಪಡೆದು ರಾಜ್ಯ ಮುಖ್ಯಮಂತ್ರಿ ಹಾಗೂ ವಾರ್ತಾ ಇಲಾಖೆಯ ಸಚಿವರಾಗಿದ್ದ ಸನ್ಮಾನ್ಯ ಶ್ರೀ ಸಿದ್ದರಾಮಯ್ಯರವರ ಮೇಲೆ ತಮ್ಮಿಂದ ಒತ್ತಡ ಹೇರಿ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳನ್ನು ಉಳಿತಾಯಕ್ಕೆ ಕ್ರಮ ವಹಿಸಬೇಕೆಂದು ಕರ್ನಾಟಕ ಕಾರ್ಯನಿರತ ದಿನ ಪತ್ರಿಕೆಗಳ ಸಂಪಾದಕರ ಸಂಘ (ರಿ) ಬೆಂಗಳೂರು ಘಟಕ ಬೀದರಿಂದ ಇಂದು ದಿನಾಂಕ 13-04-2026 ರಂದು ಬೆಳಿಗ್ಗೆ ರಾಜ್ಯ ವಿಧಾನ ಸಭೇಯ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕರವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸ್ವೀಕರಿಸಿ ಮಾತನಾಡಿದ ಅವರು ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳ ಉಳಿಗಾಲಕ್ಕೆ ಸರ್ಕಾರದ ಮೇಲೆ ಒತ್ತಡ ಹಾಕಿ ಸಂಬಂಧಪಟ್ಟ ಅವರಿಗೆ ಪತ್ರ ಬರೆಯಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ವಿಜಯಕುಮಾರ ಪಾಟೀಲ , ಪ್ರಧಾನ ಕಾರ್ಯದರ್ಶಿ ಶಶಿಕುಮಾರ ಪಾಟೀಲ, ರಾಜ್ಯ ಕಾರ್ಯಕಾರಣಿ ಸದಸ್ಯರಾದ ಅಶೋಕಕುಮಾರ ಕರಂಜಿ ಗಾದಗಿ, ವಚನ ಕ್ರಾಂತಿ ಪ್ರಾದೇಶಿಕ ದಿನ ಪತ್ರಿಕೆ ಸಂಪಾದಕರಾದ ಬಾಬುವಾಲಿ, ಬೀದರ ಜಾಗೃತ ಹಿಂದಿ ದಿನ ಪತ್ರಿಕೆಯ ಸಂಪಾದಕರಾದ ಶ್ರೀನಿವಾಸ ಚೌದರಿ, ಹಾಯ್ ಬೀದರ ಸಂಪಾದಕರಾದ ನಂದುಕುಮಾರ ಕರಂಜೆ , ಸಚೀನ ಕುವಾರ ಕರಂಜಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು ಎಂದು ಜಿಲ್ಲಾಧ್ಯಕ್ಷರಾದ ವಿಜಯಕುಮಾರ ಪಾಟೀಲ ಅವರು ತಿಳಿಸಿದ್ದಾರೆ.

## ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರನ್ನು ನಾಮಿನೇಟ್ ಮಾಡಿ ; ಮಾಲಿಕಯ್ಯಾ ಗುತ್ತೇದಾರ




**ಕಲಬುರಗಿ ;ಏ.13:** ಅರ್ಹತೆ ಇಲ್ಲದವರನ್ನು ಅಧಿಕಾರ ನೀಡುತ್ತಿರುವ ಶಾಸಕ ಎಂ.ವೈ.ಪಾಟೀಲ ಮತ್ತು ಅವರ ಸುಪುತ್ರ ಅರುಣಕುಮಾರ ಪಾಟೀಲ ನಡುವಳಿಕೆ ವಿರುದ್ಧ ನಮ್ಮ ಹೋರಾಟ ಮುಂದುವರುತ್ತದೆ ಎಂದು ಮಾಜಿ ಸಚಿವ ಮಾಲಿಕಯ್ಯಾ ಗುತ್ತೇದಾರ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕ ಎಂ.ವೈ.ಪಾಟೀಲ ಅವರನ್ನು ಮೂಲೆಗುಂಪು ಮಾಡಿ ಪುತ್ರ ಅರುಣಕುಮಾರ ಪಾಟೀಲ ಅವರೇ ತಾಲ್ಲೂಕಿನಲ್ಲಿ ರಾಜ್ಯಭಾರ ಮಾಡುತ್ತಿದ್ದಾರೆ. ಹಿಂದುಳಿದ ವರ್ಗಗಳ ಮುಖಂಡರನ್ನು ಗುರುತಿಸಿ ಅಧಿಕಾರ ನೀಡಬೇಕು. ಅರುಣಕುಮಾರ ಪಾಟೀಲ ಮುನಿಮನಾಗಿ ಕೆಲಸ ಮಾಡ್ತಿಲ್ಲ. ಶಾಸಕರೇ ಅರುಣಕುಮಾರ ಪಾಟೀಲ ಕೈಯಲ್ಲಿ ಮುನಿಮನಾಗಿ ಕೆಲಸ ಮಾಡುತ್ತಿರುವುದು ಇಡೀ ಕ್ಷೇತ್ರದ ಜನರಿಗೆ ಗೊತ್ತಿರುವ ವಿಷಯ ಎಂದು ಗುತ್ತೇದಾರ ತಿಳಿಸಿದರು.

ಶಾಸಕ ಮತ್ತು ಪುತ್ರ ಅರುಣಕುಮಾರ ಪಾಟೀಲ ಅವರಿಗೆ ಅಷ್ಟೇ ಕಾರ್ಯಕತರು, ಅಭಿಮಾನಿಗಳು ಮತ್ತು ಮುಖಂಡರು ಇಲ್ಲ. ನಮಗೂ ಕೂಡಾ ಸಾವಿರಾರು ಹಿರಿಯ ಮುಖಂಡರು, ಕಾರ್ಯಕರ್ತರು ಇದ್ದಾರೆ. ಮಾಲಿಕಯ್ಯಾ ಗುತ್ತೇದಾರಗೆ ಯಾರು ಮೂಲೆಗುಂಪು ಮಾಸಲು ಸಾಧ್ಯವಿಲ್ಲ ಎಂದು ಗುಡುಗಿದರು. ಶಾಸಕರ ಚೇಲಾಗಳು ನಾವು ಯಾವ ಪಕ್ಷದಲ್ಲಿ ಇದ್ದಾರೆ ಎಂದು ಪ್ರಶ್ನೆ ಮಾಡುತ್ತಾರೆ. ನನ್ನ ರಕ್ತದಲ್ಲೇ ಕಾಂಗ್ರೆಸ್ ಪಕ್ಷದ ರಕ್ತ ಹರಿಯುತ್ತಿದೆ ಎಂದು ಶಾಸಕರ ಆಪ್ತರಿಗೆ ತಿರುಗೇಟು ನೀಡಿದರು.

ಕಾಂಗ್ರೆಸ್ ಹಿರಿಯ ಮುಖಂಡ ಮಕ್ಬೂಲ್ ಪಟೇಲ್ ಮಾತನಾಡಿ, ಪಕ್ಷ ಸಂಘಟನೆ ಮಾಡುವವರನ್ನು ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಟಿಕೇಟ್ ನೀಡಬೇಕು. ಆರ್.ಎಸ್.ಎಸ್. ಹಿನ್ನೆಲೆ ಇರುವವರನ್ನು ಕಾಂಗ್ರೆಸ್ ಪಕ್ಷ ಪರಿಗಣಿಸಬಾರದು ಎಂದು ಪಟೇಲ್ ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರುಗಳಾದ ಜೆ.ಎಂ.ಕೊರಬು, ಸಿದ್ದು ಸಾಲಿಮನಿ, ನಾನಾಗೌಡ ಪಾಟೀಲ, ದೇವಿಂದ್ರ ಜಮಾದಾರ, ವಿಶ್ವನಾಥ ಕರ್ನಾಡ, ಜಮೀಲ ಗೌಂಡಿ, ವಿಜುಗೌಡ ಪಾಟೀಲ ಸೇರಿದಂತೆ ಅನೇಕ ಮುಖಂಡರು ಇದ್ದರು.

## ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಮನೆ ಸುಟ್ಟು ಆಸ್ತಿ ನಷ್ಟ ಮುಖ್ಯಮಂತ್ರಿ ನಿಧಿಯಿಂದ ಪರಿಹಾರಕ್ಕೆ ಕರವೇ ಮನವಿ



**ಸೇಡಂ, ಏ,13:**ತಾಲೂಕಿನ ರಾಜೋಳ ಗ್ರಾಮದಲ್ಲಿರುವ ಬಸವರಾಜ ತಂದೆ ಕಾಶಪ್ಪ ಅರಿಕೇರಿ ಇವರ ಮನೆ ಆಕಸ್ಮಿಕವಾಗಿ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ನಿಂದ ಮನೆ ಸುಟ್ಟು 15 ಲಕ್ಷಕ್ಕೂ ಹೆಚ್ಚು ಹಣ ಆಸ್ತಿ ನಷ್ಟವಾಗಿದ್ದು ಮುಖ್ಯಮಂತ್ರಿ ನಿಧಿಯಿಂದ ಪರಿಹಾರ ಒದಗಿಸಲು ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ರಾಮಚಂದ್ರ ಗುತ್ತೇದಾರ ನೇತೃತ್ವದಲ್ಲಿ ತಹಸಿಲ್ದಾರ್ ಶ್ರೀಮತಿ ಶ್ರೀಯಾಂಕಾ ಎ ಧನಶ್ರೀ ಮುಖಾಂತರ ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಿ ಒತ್ತಾಯಿಸಿದ್ದರು. ಈ ವೇಳೆಯಲ್ಲಿ ಮಹೇಶ್ ಪಾಟೀಲ್ ಚಂದ್ರಶೇಖರ್ ಪೂಜಾರಿ ಶ್ರೀನಿವಾಸ್ ರೆಡ್ಡಿ ದೇವಕುಮಾರ್ ನಾಟಿಕರ್ ಭೀಮಯ್ಯ ಗುತ್ತೇದಾರ್ ಗುಂಡಪ್ಪ ಪೂಜಾರಿ ರಾಘವೇಂದ್ರ ಕಡಗಂಚಿ ಮಲ್ಲಿಕಾರ್ಜುನ್ ಬೆನಕನಹಳ್ಳಿ ಚಂದ್ರಶೇಖರ್ ಮಡಿವಾಳ ಮಹೇಶ್ ರೆಡ್ಡಿ ಜಾಕನಪಲ್ಲಿಕಿರಣ್ ಕುಮಾರ್ ಪಾಟೀಲ್ ಪವನ್ ಕುಲಕರ್ಣಿ ಮುಕುಂದ ಬಸವರಾಜ ಅರಕೇರಿ ಹನುಮಂತ ಬೋಯಿನ್ ಜಗದೀಶ್ ಮಡಿವಾಳ ತಿಪ್ಪಣ್ಣ ಪಾನಪಲ್ಲಿ ಭದ್ರಪ್ಪ ವೀರೇಶ್ ಯಾದವ್ ರಾಜು ಯಾದವ್ ಬಾಪುಗೌಡ ಚಿಂಚೋಳಿ ಇನ್ನು ಅನೇಕ ರಂಜೋಳ ಗ್ರಾಮಸ್ಥರೂ ಇದ್ದರು

## ಏಪ್ರಿಲ್ 14ರಂದು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ: ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ಮನವಿ

**ರಾಯಚೂರು :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆಯಿಂದ ಏಪ್ರಿಲ್ 14ರಂದು ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಯನ್ನು ಆಚರಿಸಲಾಗುತ್ತಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಮುಖಂಡರು, ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ. ಅಂದು ಬೆಳಿಗ್ಗೆ 9:30 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪೂಜೆ ಹಾಗೂ ಮಾಲಾರ್ಪಣೆ ಕಾರ್ಯಕ್ರಮ ನಡೆಯಲಿದೆ. ನಂತರ ರಂಗಮಂದಿರದವರೆಗೆ ಮೆರವಣಿಗೆ ಮಾಡಲಾಗುವುದು. ಬೆಳಿಗ್ಗೆ 11ಗಂಟೆಗೆ ಶ್ರೀ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ಮತ್ತು ಕುವೆಂಪು ಕನ್ನಡ ಅಧ್ಯಯನದ ನಿರ್ದೇಶಕರಾದ ಡಾ.ಬಿ.ಎಂ.ಪುಟ್ಟಯ್ಯ ಅವರಿಂದ ಉಪನ್ಯಾಸ ಕಾರ್ಯಕ್ರಮವಿದ್ದು, ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು, ಸಮಾಜದ ಎಲ್ಲಾ ಮುಖಂಡರು, ವಿವಿಧ ಸಂಘ-ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರತಿಷ್ಠಿತ ಶಾಲೆಗಳ ದಾಖಲುಗೆ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು:** ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಿಂದ 2026-27 ನೇ ಸಾಲಿಗಾಗಿ ಪರಿಶಿಷ್ಟ ವರ್ಗದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ರಾಯಚೂರು ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ ದಾಖಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಗೆ 65 ಗುರಿ ನಿಗಧಿಪಡಿಸಲಾಗಿದೆ. ಜಿಲ್ಲೆಯ ಪ್ರತಿಭಾವಂತ ಪರಿಶಿಷ್ಟ ವರ್ಗದ 5ನೇ ತರಗತಿಯಲ್ಲಿ ಶೇ.60 ಅಂಕ ಪಡೆದ ವಿದ್ಯಾರ್ಥಿಗಳನ್ನು 6ನೇ ತರಗತಿಗೆ ಅರ್ಹತಾ ಪರೀಕ್ಷೆ ಮೂಲಕ ಆಯ್ಕೆ ಮಾಡಿ ನಿಯಮಗಳನ್ವಯ ದಾಖಲು ಮಾಡಿಕೊಳ್ಳಲಾಗುವುದು. ಈ ಪ್ರತಿಷ್ಠಿತ ಶಾಲೆಗಳಲ್ಲಿ ಉಚಿತವಾಗಿ ವಸತಿ, ಭೋಜನಾ ವೆಚ್ಚ, ಶಾಲೆಯ ಕಡ್ಡಾಯ ಶುಲ್ಕ, ಸಮವಸ್ತ್ರ, ಪಠ್ಯ ಪುಸ್ತಕ ಹಾಗೂ ಇತರೆ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನಿಗಧಿಪಡಿಸಿದಂತೆ ಸೌಲಭ್ಯ ನೀಡಲಾಗುವುದು.

ವಿದ್ಯಾರ್ಥಿಗಳು ಸಂಬಂಧಪಟ್ಟ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳಿಂದ ಅರ್ಜಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳಿಗೆ ಸಲ್ಲಿಸಬೇಕು. ಅರ್ಜಿಯೊಂದಿಗೆ ಜಾತಿ ಪ್ರಮಾಣ ಪತ್ರ, ಆದಾಯ ಪ್ರಮಾಣ ಪತ್ರದ ಪ್ರತಿಗೆ ಪತ್ರಾಂಕಿತ ಅಧಿಕಾರಿ ಅವರಿಂದ ದೃಢೀಕರಿಸಿದ ಪ್ರಮಾಣ ಪತ್ರ ಲಗತ್ತಿಸಬೇಕು. ಹಾಗೂ 2 ಭಾವಚಿತ್ರಗಳನ್ನು (ಪಾಸ್‌ಪೋರ್ಟ್ ಸೈಜ್) ಲಗತ್ತಿಸುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿ ಅಥವಾ ವಿದ್ಯಾರ್ಥಿನಿಯರ ಕುಟುಂಬದ ಆದಾಯ ಮಿತಿ 2ಲಕ್ಷ ರೂ.ಗಳ ಒಳಗಿರುವವರು ಮೇ. 04 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ರಾಯಚೂರು ಅಥವಾ ಆಯಾ ತಾಲೂಕ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಶಿವಮಾನಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಏಪ್ರಿಲ್ 17ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

**ರಾಯಚೂರು** ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಏಪ್ರಿಲ್ 17ರ ಬೆಳಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 01 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ. ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 30 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಬಾಲಾಜಿ ಕಾಂಪ್ಲೆಕ್ಸ್, ನೆಲ ಮಹಡಿ, ಗೂಡ್ ಶೆಡ್ ರಸ್ತೆ, ಸ್ಟೇಷನ್ ಏರಿಯಾ, ರಾಯಚೂರು ಹಾಗೂ ದೂರವಾಣಿ ಸಂಖ್ಯೆ 08532-231684, 9916931616, 9008211750 ಅಥವಾ 8197930236 ಗೆ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ನವೀನ ಕುಮಾರ್ ಸಂಗೇಪಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ತಾ.ಪಂ: ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಹಾಯವಾಣಿ ಆರಂಭ

**ರಾಯಚೂರು:** ಪ್ರಸ್ತುತ ಬೇಸಿಗೆ ಕಾಲ ಇರುವ ಪ್ರಯುಕ್ತ ರಾಯಚೂರು ತಾಲೂಕಿನ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ರಾಯಚೂರಿನ ತಾಲೂಕು ಪಂಚಾಯತ್ ಕಾರ್ಯಾಲಯದಲ್ಲಿ ಸಹಾಯವಾಣಿ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಕೆ ಮಾಡಿಕೊಳ್ಳಬಹುದಾಗಿದೆ ಎಂದು ಕೋರಲಾಗಿದೆ.

ತಾಲೂಕು ಪಂಚಾಯತ್ ಕಚೇರಿಯ ಬೆಳಿಗ್ಗೆ 8ರಿಂದ ಮಧ್ಯಾಹ್ನ 2ರವರಗೆ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಸೂಗೂರಪ್ಪ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಬಸಯ್ಯ ದೂರವಾಣಿ ಸಂಖ್ಯೆ: 08532-230023, 9483203052, ಮಧ್ಯಾಹ್ನ 2ರಿಂದ ಸಂಜೆ 5ರವರೆಗೆ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾದ ಚಾಂದಪಾಷ್ 8861979448ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತ ಮಕ್ಕಳಿಂದ ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು:** ತೋಟಗಾರಿಕೆ ಇಲಾಖೆಯಿಂದ 2026-27ನೇ ಸಾಲಿಗೆ ಜಿಲ್ಲೆಯ ಆಸಕ್ತಿಯುಳ್ಳ ಅರ್ಹ ರೈತ ಮಕ್ಕಳಿಗೆ ಕೊಪ್ಪಳ ತಾಲ್ಲೂಕಿನ ಮುನಿರಾಬಾದ ತೋಟಗಾರಿಕಾ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿ ನಡೆಯಲಿದ್ದು, ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಅಂಗವಿಕಲರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 33 ವರ್ಷ, ಮಾಜಿ ಸೈನಿಕರಿಗೆ 33 ರಿಂದ ಗರಿಷ್ಟ 65 ವರ್ಷ ಹಾಗೂ ಇತರರಿಗೆ ಕನಿಷ್ಟ 18 ವರ್ಷ ಮತ್ತು ಗರಿಷ್ಟ 30 ವರ್ಷದ ಅಭ್ಯರ್ಥಿಗಳು ಕನ್ನಡ ವಿಷಯದೊಂದಿಗೆ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ತರಬೇತಿ ಪ್ರವೇಶ ಬಯಸುವ ಅಭ್ಯರ್ಥಿಯ ತಂದೆ / ತಾಯಿ / ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಹಾಗೂ ಸ್ವಂತ ಸಾಗುವಳಿ ಮಾಡುತ್ತಿರಬೇಕು.

ಅರ್ಜಿಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರುರಾಜ್ಯವಲಯ, ರಾಯಚೂರುಕಛೇರಿ ಅಥವಾ ಇಲಾಖೆಯ ವೆಬ್‌ಸೈಟ್ ವಿಳಾಸ: https://horticulturedir.karnataka.gov.in ಮೂಲಕ ಪಡೆದು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಏಪ್ರಿಲ್ 20ರ ಸಂಜೆ 05.30ರೊಳಗಾಗಿ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ, ರಾಜ್ಯ ವಲಯ, ರಾಯಚೂರಿಗೆ ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ರಾಜ್ಯ ವಲಯದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE